ಸಂಪುಟ : 9 ಸಂಚಿಕೆ 160 ಪುಟ : 4 ಬೆಲೆ: 3.00 ಬುಧವಾರ ಜುಲೈ 31 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 160 Pages : 4 Price : 3.00 Wednesday July 31 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ, ಸತ್ರ ನ್ಯಾಯಾಧೀಶ ಬಸವರಾಜ

# ಮಾನವ ಕಳ್ಳ ಸಾಗಾಣಿಕೆ ತಡೆಯುವದು ಎಲ್ಲರ ಜವಾಬ್ದಾರಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಾನವ ಕಳ್ಳ ಸಾಗಾಣಿಕೆ ಒಂದು ಸಾಮಾಜಿಕ ಪಿಡುಗಾಗಿದ್ದು, ಇದನ್ನು ತಡೆಗಟ್ಟುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ತಿಳಿಸಿದರು.ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಬಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ'ಯನ್ನು ಉದ್ಘಾಟಿಸಿ ಮಾತನಾಡಿದರು.

ಮಾನವ ಕಳ್ಳ ಸಾಗಾಣಿಕೆಗೆ ಬಡತನ, ಹೆಚ್ಚುತ್ತಿರುವ ವಲಸೆ, ಕುಟುಂಬದ ಸಮಸ್ಯೆ ಮೂಲ ಕಾರಣಗಳಾಗಿವೆ. ಸಂವಿಧಾನದ ಶಿಲ್ಪಿ ಡಾ.ಅಂಬೇಡ್ಕರ್ ಅವರು ಮಹಿಳೆ ಮತ್ತು ಮಕ್ಕಳು ಸುಶಿಕ್ಷಿತರಾದರೆ ಒಳ್ಳೆಯ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದ್ದರು. ಮಾನವ ಕಳ್ಳ ಸಾಗಾಣಿಕೆ ತಡೆಗಟ್ಟುವುದು ವಿವಿಧ ಇಲಾಖೆಗಳ ಕರ್ತವ್ಯವಲ್ಲದೇ ಸಮಾಜದ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯೂ ಆಗಿದೆ. ಲೈಂಗಿಕ ಶೋಷಣೆ, ಮಕ್ಕಳ ಭಿಕ್ಷಾಟನೆ, ಜೀತಕ್ಕಾಗಿ, ಬಾಲಕಾರ್ಮಿಕತೆ, ಅಂಗಾಂಗ ಕಸಿಗಾಗಿ, ಬಾಲ್ಯ ವಿವಾಹ ಮುಂತಾದ ಕಾರಣಗಳಿಗಾಗಿ ಮಾನವ ಕಳ್ಳ ಸಾಗಾಣಿಕೆಯನ್ನು ಮಾಡಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ಮಹಿಳೆ ಮತ್ತು ಮಕ್ಕಳನ್ನು ಕಳ್ಳತನ ಮಾಡಿ ಹೊರದೇಶಕ್ಕೆ ಕರೆದುಕೊಂಡು ಹೋಗುವುದು, ಅನೈತಿಕ ಕಾರ್ಯಗಳಿಗೆ ಬಳಸುವುದು, ಅಪಾಯಕಾರಿ ಕಾರ್ಖಾನೆಗಳಲ್ಲಿ ಮಕ್ಕಳನ್ನು ಕೆಲಸಕ್ಕೆ ತೊಡಗಿಸುವುದು, ಬಂದ ಹಣವನ್ನು ವಸೂಲು ಮಾಡುವುದು ಇವೆಲ್ಲ ಮಾನವ ಕಳ್ಳ ಸಾಗಾಣಿಕೆಯ ಮುಖ್ಯ ಉದ್ದೇಶವಾಗಿದೆ. ಇದನ್ನು ತಡೆಗಟ್ಟಲು ಎಲ್ಲ ಇಲಾಖೆಯ ಅಧಿಕಾರಿಗಳು ಶ್ರಮಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಇದರ ತಡೆಗಾಗಿ ಎಲ್ಲರೂ ಜಾಗೃರಾಗಬೇಕು ಎಂದು ತಿಳಿಸಿದರು. ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತು ಮಕ್ಕಳ ರಕ್ಷಣಾ ಘಟಕದ ಮಲ್ಲಪ್ಪ ಹೊಸಳ್ಳಿ ಪ್ರತಿಜ್ಞಾ ವಿಧಿಸಿ ಬೋಧಿಸಿದರು. ಮಹಿಳಾ ಅಭಿವೃದ್ಧಿ ಅಧಿಕಾರಿ ಕಮಲಾ ಬೇಟಿ ಬಚಾವೋ ಬೇಟಿ ಪಡಾವೋ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು. ಮಕ್ಕಳ ರಕ್ಷಣಾ ಘಟಕದ ಬಿತ್ತಿಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾದ ಮಂಜುನಾಥ ಅಸೂಟಿ ಮಾತನಾಡಿ, ಮಾನವ ಕಳ್ಳಸಾಗಣೆಯು ಹಿಂದಿನ ಕಾಲದಿಂದಲೂ ಇದೆ. ಇದೊಂದು ಸಂಘಟಿತವಾಗಿ ಮಾಡುವ ಅಪರಾಧವಾಗಿದ್ದು, ಮಾರುಕಟ್ಟೆಯಲ್ಲಿ ಜಾನುವಾರು ಮಾರಾಟದಂತೆ ಮನುಷ್ಯರನ್ನು ಬಹಿರಂಗವಾಗಿ ಮಾರಲಾಗುತ್ತದೆ. ಆಧುನಿಕ ಕಾಲದಲ್ಲಿ ಮಾನವ ಕಳ್ಳ ಸಾಗಣೆ ಮಾಡಿ ಅಪಾಯಕಾರಿ ಕ್ಷೇತ್ರಗಳಲ್ಲಿ ಬಳಕೆ ಮಾಡುತ್ತಾರೆ. ಕಾನೂನು ಬಾಹಿರವಾಗಿ ಗೌಪ್ಯ ಸ್ಥಳಕ್ಕೆ ಸ್ಥಳಾಂತರಿಸಿ ಲೈಂಗಿಕವಾಗಿ ಅಶ್ಲೀಲವಾಗಿ ಬಳಸಿಕೊಳ್ಳುತ್ತಾರೆ. ಮಾನವ ಕಳ್ಳಸಾಗಣೆಗೆ ಹೆಚ್ಚಾಗಿ ಹದಿಹರೆಯದವರು, ವಿಧವೆಯರು, ಆರ್ಥಿಕ ಸಮಸ್ಯೆಯಿಂದ ಬಳಲುತ್ತಿರುವ, ಅನಕ್ಷರಸ್ಥರು, ನಿರುದ್ಯೋಗಿಗಳು, ಸೇರಿದಂತೆ ಇಂದಿನ ಮಕ್ಕಳು ಸಾಮಾಜಿಕ ಜಾಲತಾಣದಲ್ಲಿ ಅಪರಿಚಿತರನ್ನು ನಂಬಿ ಬಲಿಪಶುಗಳಾಗುತ್ತಾರೆ ಎಂದರು.

ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ ಮಾತನಾಡಿ, ಮಾನವ ಕಳ್ಳ ಸಾಗಾಣಿಕೆಯು ಒಂದು ಸಾಮಾಜಿಕ ಪಿಡುಗಾಗಿದೆ. ಸಮಾಜದಲ್ಲಿ ಪ್ರತಿಯೊಬ್ಬರನ್ನು ಕೂಡ ಗೌರವದಿಂದ ಕಾಣಬೇಕು ಎಂದು ಜಾಗೃತಿ ಮೂಡಿಸಲು 12ನೇ ಶತಮಾನದಲ್ಲಿ ಜಗಜ್ಯೋತಿ ಬಸವಣ್ಣನವರು ತಮ್ಮನ್ನು ತಾವು ತೊಡಗಿಸಿಕೊಂಡರು. ಮಾನವರನ್ನು ಗೌರವದಿಂದ ಕಾಣುವುದು ಹಾಗೂ ಗೌರವಯುತವಾಗಿ ಬದುಕಲು ಅವಕಾಶ ಕಲ್ಪಿಸುವುದು ಮಾನವ ಹಕ್ಕುಗಳ ಕಾಯ್ದೆಯ ಮೂಲ ಸ್ವರೂಪವಾಗಿದೆ ಎಂದು ವಿವರಿಸಿದರು. ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಉಪವಿಭಾಗಾಧಿಕಾರಿ ಗಂಗಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ, ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿ ಪಾಟೀಲ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಕುರ್ತಕೋಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಇತರರು ಇದ್ದರು.

ಸರ್ಕಾರಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸ್ವಾಗತಿಸಿದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು. ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಫೀಕಾ ಹಳ್ಳೂರ ವಂದಿಸಿದರು.

> ಮಾನವ ಕಳ್ಳಸಾಗಣೆ ತಡೆಗಟ್ಟಲು ಸಮಾಜದ ಸ್ವಸಹಾಯ ಗುಂಪಿನವರು, ಕುಟುಂಬಸ್ಥರು ಸೇರಿದಂತೆ ಪ್ರತಿಯೊಬ್ಬರೂ ಶ್ರಮವಹಿಸಬೇಕು. ಮಕ್ಕಳು ಯಾವುದೇ ರೀತಿಯ ತೊಂದರೆಗೊಳಗಾದರೆ ಮಕ್ಕಳ ಸಹಾಯವಾಣಿ ಸಂಖ್ಯೆ 1098, ಮಾನವ ಹಕ್ಕುಗಳ ಅಯೋಗ ಸಹಾಯವಾಣಿ–18004252333, ಮಹಿಳಾ ಸಹಾಯವಾಣಿ 181, ಕಾರ್ಮಿಕ ಸಹಾಯವಾಣಿ 155214, ತುರ್ತು ಸ್ಪಂದನ ಸಹಾಯವಾಣಿ–112 ಸಂಪರ್ಕಿಸಬಹುದಾಗಿದೆ ಎಂದು ಮಂಜುನಾಥ ಅಸೂಟಿ ಹೇಳಿದರು.

> ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮಾತನಾಡಿ, ಹೆಣ್ಣುಮಕ್ಕಳಿಗೆ ಮೋಸ ಮಾಡಿ ಪಾಲಕರಿಂದ ಬೇರ್ಪಡಿಸಿ ನಂತರ ಅವರನ್ನು ವೇಶ್ಯಾವಾಟಿಕೆಗೆ ತಳ್ಳುವುದು ಹಾಗೂ ಮಕ್ಕಳನ್ನು ಅಪಹರಿಸಿ ಬಿಕ್ಷಾಟನೆಗೆ ಕಳುಹಿಸುವುದು ಇವೆಲ್ಲ ಮಾನವ ಕಳ್ಳ ಸಾಗಾಣಿಕೆಗಳಾಗಿವೆ. ಪ್ರಸ್ತುತ ಕಾಲದಲ್ಲಿ ಬಡತನವಷ್ಟೇ ಅಲ್ಲದೆ, ಜಾಗೃತಿಯ ಕೊರತೆ ಮುಖ್ಯವಾಗಿದೆ. ಕಾರಣ, ಕಾಲೇಜು ಯುವತಿಯರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು. ಯಾವುದೇ ಕಾರಣಕ್ಕೂ ಯಾರಿಂದಲೂ ಪ್ರಲೋಭನೆಗೆ ಒಳಗಾಗಬಾರದು, ಮೊಬೈಲ್‌ನ ಮುಖಾಂತರ ಆಕರ್ಷಣೆಗೆ ಮತ್ತು ಆಮಿಷಗಳಿಗೆ ಒಳಗಾಗಿ ಮೋಸಹೋಗಬಾರದು ಎಂದರು.

# ಮಾನವ ಕಳ್ಳಸಾಗಾಣಿಕೆಯ ಅರಿವು ಮೂಡಿಸಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಾನವ ಕಳ್ಳಸಾಗಾಣಿಕೆ ಜಾಲಕ್ಕೆ ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳು ಬಲಿಯಾಗುತ್ತಿದ್ದು, ಇದನ್ನು ತಡೆಯುವಲ್ಲಿ ಮಕ್ಕಳು ಸಮಾಜದ ಗಮನ ಸೆಳೆಯಬೇಕು, ಅರಿವು ಮೂಡಿಸಬೇಕು ಎಂದು ಲಕ್ಷ್ಮೇಶ್ವರದ ಹಿರಿಯ ದಿವಾಣಿ ನ್ಯಾಯಾಧೀಶರಾದ ಪದ್ಮಶ್ರೀ ಆರ್.ಪಾಟೀಲ ಮಕ್ಕಳಿಗೆ ಕಿವಿಮಾತು ಹೇಳಿದರು.

ಅವರು ಬುಧವಾರ ಲಕ್ಷ್ಮೇಶ್ವರದ ಆಕ್ಸಫರ್ಡ್ ಶಾಲೆಯಲ್ಲಿ ತಾಲೂಕಾ ಕಾನೂನು ಸೇವೆಗಳ ಸಮಿತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಕಂದಾಯ ಇಲಾಖೆ ಮತ್ತು ನ್ಯಾಯವಾದಿಗಳ ಸಂಘ ಲಕ್ಷ್ಮೇಶ್ವರ ಇವುಗಳ ಆಶ್ರಯದಲ್ಲಿ ಮಾನವ ಕಳ್ಳಸಾಗಾಣಿಕೆ ತಡೆ ದಿನದ ಅಂಗವಾಗಿ ನಡೆದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶ್ವಸಂಸ್ಥೆ ಸೇರಿದಂತೆ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರಿಯ ಪಿಡುಗಾದ ಮಾನವ ಕಳ್ಳಸಾಗಾಣಿಕೆಯನ್ನು ತಡೆಯಲು ಮುಂದಿನ ಪ್ರಜೆಗಳಾದ ಮಕ್ಕಳು ಜಾಗೃತರಾಗಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ದಿವಾಣಿ ನ್ಯಾಯಾಧೀಶರಾದ ಸತೀಶ ಎಂ. ಮಾನವ ಕಳ್ಳಸಾಗಾಣಿಕೆ ತಡೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು. ವಕೀಲರಾದ ಪಿ.ಎಂ. ವಾಲಿ ಮಾನವ ಕಳ್ಳಸಾಗಾಣಿಕೆ ತಡೆ ದಿನಾಚರಣೆಯ ಕುರಿತು ಮಕ್ಕಳಿಗೆ ನೈಜ ಘಟನೆಗಳ ಉದಾಹರಣೆಗಳನ್ನು ನೀಡುವ ಮೂಲಕ ಮಾನವ ಕಳ್ಳ ಸಾಗಾಣಿಕೆಯ ವಿಷಯದ ಕುರಿತು ಮಾಹಿತಿ ನೀಡಿದರು.

ತಹಸೀಲ್ದಾರ ವಾಸುದೇವಸ್ವಾಮಿ, ಸಹಾಯಕ ಸರ್ಕಾರಿ ಅಭಿಯೋಜಕರಾದ ಹೀನಾಕೌಸರ ಗಂಜಿಹಾಳ, ಮಾತನಾಡಿದರು. ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ, ಪಿಎಸ್‌ಐ ಈರಪ್ಪ ರಿತ್ತಿ, ವಕೀಲರಾದ ಎ.ಟಿ. ಕಟ್ಟಿಮನಿ, ಸಿಆರ್‌ಪಿ ಉಮೇಶ್ ನೇಕಾರ, ಎನ್.ಎ. ಮುಲ್ಲಾ, ಆಕ್ಸಫರ್ಡ್ ಶಾಲೆಯ ಮುಖ್ಯ ಶಿಕ್ಷಕಿ ಪ್ರಗತಿ ತಾವರೆ ಉಪಸ್ಥಿತರಿದ್ದರು. ನಂದಾ ಪಶುಪತಿಹಾಳ, ಚೇತನಾ ಹಿರೇಮಠನ್ನಿರೂಪಿಸಿದರು. ಶಾಲೆಯ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ನೂತನ ಪದಾಧಿಕಾರಿಗಳ ಪದಗ್ರಹಣ



**■ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಘಟಕಕ್ಕೆ ನೂತನವಾಗಿ ಅವಿರೋಧವಾಗಿ ಆಯ್ಕೆಯಾಗಿರುವ ತಾಲೂಕಾಧ್ಯಕ್ಷರು ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಮಂಗಳವಾರ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಅ.ಭಾ.ವಿ.ಮ. ಗದಗ ಜಿಲ್ಲಾಧ್ಯಕ್ಷ ಶರಣಬಸವ ಗುಡಿಮನಿ ವಹಿಸಿದ್ದರು. ಅತಿಥಿಗಳಾಗಿ ನಿಕಟಪೂರ್ವ ಗದಗ ತಾಲೂಕಾಧ್ಯಕ್ಷ ಸಿದ್ದಣ್ಣ ಪಲ್ಲೇದ, ತಾಲೂಕಾ ಚುನಾವಣಾ ಅಧಿಕಾರಿ ಎಸ್.ಎಂ. ಅಗಡಿ, ಟಿ.ಎಸ್. ಬಂಡಿಹಾಳ ಉಪಸ್ಥಿತರಿದ್ದರು.

ನೂತನವಾಗಿ ಆಯ್ಕೆಯಾಗಿರುವ ಅಧ್ಯಕ್ಷರಾದ ಮಹೇಶ ಚ.ಕೋಟಿ, ಉಪಾಧ್ಯಕ್ಷರಾದ ಚನ್ನಬಸಪ್ಪ ಅಕ್ಕಿ, ಕಾರ್ಯಕಾರಿ ಮಂಡಳಿ ಸದಸ್ಯರಾದ ವಿಜಯಕುಮಾರ ಕಟ್ಟಿ, ಫಕ್ಕೀರಗೌಡ ಪಾಟೀಲ, ಚನ್ನಬಸಪ್ಪ ದುಂದೂರ, ಸಿದ್ರಾಮೇಶ ಹಿರೇಮಠ, ಶಾಂತಯ್ಯ ಮುತ್ತಿನಪೆಂಡಿಮಠ, ಸಂತೋಷ ಮೇಲಗಿರಿ, ಸಂಗಮೇಶ ಕವಳಿಕಾಯಿ, ಮಹಾಂತೇಶ ನಲವಡಿ, ವಿಶ್ವನಾಥ ಹಳ್ಳಿಕೇರಿ, ಶೋಭಾ ಗುಗ್ಗರಿ, ಸುರೇಶ ಚಿತ್ತರಗಿ, ಮೋಹನ ದೊಡ್ಡಕುಂಡಿ ಅವರಿಗೆ ಚುನಾವಣಾಧಿಕಾರಿಗಳು ಅಖಿಲ ಭಾರತ ವೀರಶೈವ ಮಹಾಸಭಾ ಪ್ರಮಾಣಪತ್ರವನ್ನು ವಿತರಿಸಿದರು.

# ಬೀದಿ ಬದಿ ವ್ಯಾಪಾರಸ್ಥರು ಆರ್ಥಿಕವಾಗಿ ಸಬಲರಾಗಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್**

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬೀದಿಬದಿ ವ್ಯಾಪಸ್ಥರ ಕ್ಷೇಮಾಭಿವೃದ್ಧಿಗಾಗಿ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ನರೇಗಲ್ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ರಮೇಶ ಹೊಸಮನಿ ಹೇಳಿದರು.

ಅವರು ಪಟ್ಟಣ ಪಂಚಾಯಿತಿ ವತಿಯಿಂದ ಬೀದಿ ಬದಿ ವ್ಯಾಪಾರಸ್ಥರ ಸರ್ವೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಬೀದಿಬದಿ ವ್ಯಾಪಾರಿಗಳು ಅನೌಪಚಾರಿಕ ಅರ್ಥ ವ್ಯವಸ್ಥೆಯ ಪಿರಮಿಡ್‌ನ ತಳದಲ್ಲಿ ಒಂದು ಮುಖ್ಯ ಭಾಗವಾಗಿದ್ದಾರೆ. ಬೀದಿ ವ್ಯಾಪಾರವು ಸ್ವ–ಉದ್ಯೋಗದ ಒಂದು ಮೂಲವಾಗಿದೆ. ನಗರದ ಸರಬರಾಜು ಸರಣಿಯಲ್ಲಿ ಬೀದಿ ವ್ಯಾಪಾರವು ಒಂದು ಮಹತ್ವದ ಸ್ಥಾನ ಪಡೆದುಕೊಂಡಿದೆ. ಇದು ಬಡವರೂ ಸೇರಿದಂತೆ ಜನಸಂಖ್ಯೆಯ ಎಲ್ಲ ಭಾಗಗಳಿಗೂ ದುಬಾರಿಯಲ್ಲದ ಮತ್ತು ಅನುಕೂಲಕರವಾಗಿ ಸರಕುಗಳು ಮತ್ತು ಸೇವೆಗಳು ಲಭ್ಯವಾಗುವುದಕ್ಕೆ ಅವಕಾಶ ಕಲ್ಪಿಸುತ್ತದೆ. ಬೀದಿ ಬದಿ ವ್ಯಾಪಾರಸ್ಥರ ಸರ್ವೆ ಕಾರ್ಯ ಮುಗಿದ ನಂತರ ಎಲ್ಲರಿಗೂ ಗುರುತಿನ ಚೀಟಿ ವಿತರಿಸಲಾಗುತ್ತದೆ. ವ್ಯಾಪಾರ ವೃದ್ಧಿಗಾಗಿ ವಿಶೇಷ ತರಬೇತಿ ಸೇರಿದಂತೆ ಸಾಲ ಸೌಲಭ್ಯಗಳನ್ನು ನೀಡುವ ಗುರಿ ಹೊಂದಲಾಗಿದೆ ಎಂದರು.

ಈ ಸಂದರ್ಭದಲ್ಲಿ ಸಮುದಾಯ ಸಂಘಟಕ ವಿ.ವೈ. ಮಡಿವಾಳರ, ಸಿಆರ್‌ಪಿ ಅಶ್ವಿನಿ ಹಿರೇಮಠ, ಶಂಕ್ರಪ್ಪ ದೊಡ್ಡಣ್ಣವರ, ಆರಿಫ್ ಮಿರ್ಜಾ, ರಮೇಶ ಹಲಗಿ, ಟಿವಿಸಿ ಕಮಿಟಿ ಸದಸ್ಯರಾದ ವೀರಪ್ಪ ಹುರಕಡ್ಲಿ, ಶಿವಾನಂದ ಪದ್ಮಸಾಲಿ, ಶಿವು ಮುಳಗುಂದ, ದ್ಯಾಮಪ್ಪ ಕಡೆತೋಟದ, ದೇವಕ್ಕ ರಾಠೋಡ ಮುಂತಾದವರಿದ್ದರು.

# ಡಿಡಿಪಿಐ ಎಂ.ಎ. ರಡ್ಡೇರ ನಿವೃತ್ತಿ ನಿಮಿತ್ತ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**



ಕಳೆದ 27 ವರ್ಷಗಳಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ತಮ್ಮದೇ ಆದ ಹೆಜ್ಜೆ ಗುರುತುಗಳನ್ನು ಮೂಡಿಸಿದ ಡಿಡಿಪಿಐ ಎಂ.ಎ. ರಡ್ಡೇರರು ಜುಲೈ 31ರಂದು ನಿವೃತ್ತಿ ಹೊಂದಲಿದ್ದಾರೆ. ಜಿಲ್ಲೆಯ ಆರಂಭದ ವರ್ಷದಿಂದಲೇ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಚೇರಿಯಲ್ಲಿ ವಿಷಯ ಪರೀಕ್ಷಕರಾಗಿ ಸೇವೆ ಆರಂಭಿಸಿದ ರಡ್ಡೇರರು ಮುಂದೆ ಕ್ಷೇತ್ರ ಶಿಕ್ಷಣಾಧಿಕಾರಿಗಳಾಗಿ, ಉಪನ್ಯಾಸಕರಾಗಿ ಪ್ರಸ್ತುತ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಲಿದ್ದಾರೆ. ತಮ್ಮದೇ ಆದ ಚಿಂತನೆಗಳ ಮೂಲಕ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವಲ್ಲಿ ಕ್ರಿಯಾಶೀಲರಾಗಿ ಸಾಕಷ್ಟು ಕೆಲಸಗಳನ್ನು ಮಾಡಿದ್ದಾರೆ. ಅದರ ಪ್ರತಿಫಲ ಎನ್ನುವಂತೆ 25ನೇ ಸ್ಥಾನದಲ್ಲಿದ್ದ ಎಸ್‌ಎಸ್‌ಎಲ್‌ಸಿ ಫಲಿತಾಂಶ ಈ ಬಾರಿ 10ನೇ ಸ್ಥಾನಕ್ಕೆ ಬಂದಿದ್ದು ಅವರ ಶ್ರಮಕ್ಕೆ ಸಾಕ್ಷಿಯಾಗಿದೆ. ಸದಾ ಹೊಸ ವಿಚಾರಗಳನ್ನು ಶೈಕ್ಷಣಿಕ ಕ್ಷೇತ್ರದಲ್ಲಿ ಅಳವಡಿಸುವ ಮೂಲಕ ಶಿಕ್ಷಕ ಸಮೂಹವನ್ನು ಜಾಗೃತಿಗೊಳಿಸಿ ಹೆಚ್ಚೆಚ್ಚು ಕೆಲಸ ಮಾಡುವಂತೆ ಪ್ರೋತ್ಸಾಹಿಸಿ ಗುಣಮಟ್ಟದ ಶಿಕ್ಷಣ ಹೊರಹೊಮ್ಮುವಂತೆ ಮಾಡಿದ್ದಾರೆ.

ನಿವೃತ್ತಿಯ ನಿಮಿತ್ತ ಎಂ.ಎ. ರಡ್ಡೇರರನ್ನು ಸನ್ಮಾನಿಸುವ ಕಾರ್ಯಕ್ರಮವನ್ನು ಸಭಾಪತಿಗಳಾದ ಬಸವರಾಜ್ ಹೊರಟ್ಟಿ ದಂಪತಿಗಳು ದತ್ತು ಪಡೆದ ಸ್ಥಳೀಯ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಜುಲೈ 31ರಂದು ಬೆಳಿಗ್ಗೆ 9.15 ಗಂಟೆಗೆ ಶ್ರೀ ಬಸವರಾಜ್ ಹೊರಟ್ಟಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.



## ಮನೆ ಊಟ, ಬಟ್ಟೆ, ಬೆಡ್‌ಗಾಗಿ ಅನುಮತಿ ಕೋರಿ ನಟ ದರ್ಶನ್ ಹೊಸ ಅರ್ಜಿ





■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಹಿನ್ನಲೆಯಲ್ಲಿ ಜೈಲುಪಾರಾಗಿರುವ ನಟ ದರ್ಶನ್ ಇದೀಗ ಮನೆಯೂಟ, ಹಾಸಿಗೆ ಮತ್ತು ಪುಸ್ತಕ ಪೂರೈಕೆಗೆ ಅನುಮತಿಸಲು ಜೈಲಧಿಕಾರಿಗೆ ನಿರ್ದೇಶನ ನೀಡುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹಿಂಪಡೆದಿದ್ದಾರೆ.

ನಟ ದರ್ಶನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಹೇಮಂತ್ ಚಂದನಗೌಡರ್ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಈ ವೇಳೆ ದರ್ಶನ್ ಪರ ಹಾಜರಾಗಿದ್ದ ಹಿರಿಯ ವಕೀಲ ಪ್ರಭುಲಿಂಗ ನಾವದಗಿ ಅವರು, ಹೈಕೋರ್ಟ್ ನಿರ್ದೇಶನದಂತೆ ಮನೆ ಊಟ ಪೂರೈಸಲು ಜೈಲು ಅಧಿಕಾರಿಗೆ ನಿರ್ದೇಶನ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣಾಧೀನ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ತಿರಸ್ಕರಿಸಿದೆ. ಹೀಗಾಗಿ ಹೈಕೋರ್ಟ್‌ನಲ್ಲಿ ಅರ್ಜಿ ಹಿಂಪಡೆಯಲು ಮೆಮೊ ಸಲ್ಲಿಸಿದ್ದೇವೆ. ಹೊಸ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿ, ಈ ಅರ್ಜಿ ಹಿಂಪಡೆಯಲು ಅನುಮತಿಸಬೇಕು ಎಂದು ಕೋರಿದರು. ಇದನ್ನು ಪುರಸ್ಕರಿಸಿದ ಪೀಠವು ಅರ್ಜಿ ಹಿಂಪಡೆಯಲು ಅನುಮತಿ ನೀಡಿದೆ.ಹೈಕೋರ್ಟ್ ನಲ್ಲಿ ನಡೆದ ವಿಚಾರಣೆ ವೇಳೆ, ಮನೆ ಊಟ ಪಡೆಯಲು ಇಷ್ಟೆಲ್ಲಾ ಮಾಡಬೇಕಾ? ಇದರಲ್ಲೇನಿದೆ? ಶುಚಿಯಾದ ಆಹಾರ ಪಡೆಯುವುದು ಮೂಲಭೂತ ಹಕ್ಕು. ಗುಜರಾತ್ ಹೈಕೋರ್ಟ್‌ನಲ್ಲಿ ಪ್ರಕರಣವೊಂದರಲ್ಲಿ ಅಡ್ವೊಕೇಟ್ ಜನರಲ್ ಮನೆ ಊಟ ಪಡೆಯುವುದಕ್ಕೆ ಸಹಮತಿಸಿದ್ದಾರೆ ಎಂದು ನ್ಯಾಯಪೀಠ ತಿಳಿಸಿತ್ತು. ಇದಕ್ಕೆ ವಿಶೇಷ ಸರ್ಕಾರಿ ಅಭಿಯೋಜಕ ಪಿ ಪ್ರಸನ್ನಕುಮಾರ್ ಅವರು, ಮನೆಯೂಟಕ್ಕೆ ನಾವು ವಿರೋಧಿಸುತ್ತಿಲ್ಲ. ಕಾನೂನಿನಲ್ಲಿ ಅವಕಾಶವಿದ್ದರೆ ಕೊಡಬಹುದು ಎಂದಷ್ಟೇ ಹೇಳಿದ್ದೇವೆ ಎಂದು ಸಮಜಾಯಿಷಿ ನೀಡಿದರು.

ಈ ಹಿಂದೆ ಹೈಕೋರ್ಟ್ ನಿರ್ದೇಶನದಂತೆ ದರ್ಶನ್ ಅವರು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಮುಂದೆ ಅರ್ಜಿ ಸಲ್ಲಿಸಿದ್ದರು. ಇದನ್ನು ತಿರಸ್ಕರಿಸಿದ್ದ ನ್ಯಾಯಾಲಯವು, ಕರ್ನಾಟಕ ಕಾರಾಗೃಹಗಳು ಮತ್ತು ತಿದ್ದುಪಡಿ ಸೇವೆಗಳ ಕೈಪಿಡಿ–201ರ ಅಧಿನಿಯಮ 728ರ ಪ್ರಕಾರ ಕೊಲೆ ಆರೋಪ ಎದುರಿಸುತ್ತಿರುವವರನ್ನು ಹೊರತುಪಡಿಸಿ ನ್ಯಾಯಾಂಗ ಬಂಧನದಲ್ಲಿರು ಇತರೆ ವಿಚಾರಣಾಧೀನ ಕೈದಿಗಳು ಸ್ವಂತ ಖರ್ಚಿನಲ್ಲಿ ಬಟ್ಟೆ, ಹಾಸಿಗೆ, ಚಪ್ಪಲಿ, ಆಹಾರ, ಸ್ಪೂನ್, ತಟ್ಟೆ ಹಾಗೂ ಕಪ್ ಇನ್ನಿತರ ವಸ್ತುಗಳನ್ನು ಪಡೆಯಲು ಅವಕಾಶವಿರುತ್ತದೆ. ಅದರಂತೆ ಕೊಲೆ ಆರೋಪ ಎದುರಿಸುತ್ತಿರುವ ದರ್ಶನ್ ಮನೆಯಿಂದ ಊಟ, ಬಟ್ಟೆ ಹಾಗೂ ಹಾಸಿಗೆ ಸೌಲಭ್ಯ ಪಡೆಯಲು ಅರ್ಹರಾಗಿಲ್ಲ ಎಂದು ಹೇಳಿತ್ತು.

## ಜಾರ್ಖಂಡ್‌ನಲ್ಲಿ ಮುಂಬೈ–ಹೌರಾ ರೈಲು ಅಪಘಾತ; ಹಳಿತಪ್ಪಿದ 18 ಕೋಚ್‌ಗಳು, ಇಬ್ಬರು ಸಾವು



■ವಿಜಯಸಾಕ್ಷಿ ಸುದ್ದಿ, ಜಾರ್ಖಂಡ್

ಜಾರ್ಖಂಡ್‌ನ ಚಕ್ರಧರಪುರ ಬಳಿ ಹೌರಾ–ಸಿಎಸ್‌ಎಂಟಿ ಎಕ್ಸ್‌ಪ್ರೆಸ್‌ನ 18 ಬೋಗಿಗಳು ಹಳಿತಪ್ಪಿದ್ದರಿಂದ ಕನಿಷ್ಠ ಇಬ್ಬರು ಸಾವನ್ನಪ್ಪಿದ್ದು, ಸುಮಾರು 150 ಜನರು ಗಾಯಗೊಂಡಿದ್ದಾರೆ. ಆಗ್ನೇಯ ರೈಲ್ವೆಯ ಚಕ್ರಧರಪುರ ವಿಭಾಗದ ಅಡಿಯಲ್ಲಿ ಜಮ್ಶೆಡ್‌ಪುರದಿಂದ 80 ಕಿಮೀ ದೂರದಲ್ಲಿರುವ ಬಾರಾಬಾಂಬೂ ಬಳಿ ಮುಂಜಾನೆ 3.45 ಕ್ಕೆ ಅಪಘಾತ ಸಂಭವಿಸಿದೆ.

ಹಳಿತಪ್ಪಿದ ಬಗ್ಗೆ ವರದಿಯಾದ ತಕ್ಷಣ ರಕ್ಷಣಾ ತಂಡಗಳನ್ನು ಸ್ಥಳಕ್ಕೆ ಕಳುಹಿಸಲಾಗಿದೆ. ಪ್ರಸ್ತುತ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆ ನಡೆಯುತ್ತಿದೆ. ಹಳಿತಪ್ಪಿದ ನಂತರ ಮೂರು ರೈಲುಗಳನ್ನು ರದ್ದುಗೊಳಿಸುವುದರೊಂದಿಗೆ ಮಾರ್ಗವು ಪರಿಣಾಮ ಬೀರಿದೆ. ರೈಲ್ವೇಯು ಅಪಘಾತದ ಸ್ಥಳದಿಂದ ಪ್ರಯಾಣಿಕರಿಗೆ ಕೋಚಿಂಗ್ ರೇಕ್ ಮತ್ತು ಬಸ್ಸುಗಳು ಸೇರಿದಂತೆ ವಿಶೇಷ ಸಾರಿಗೆ ವ್ಯವಸ್ಥೆ ಮಾಡಿದೆ.

ಘಟನೆಯಲ್ಲಿ 10 ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಆರು ತಿಂಗಳಲ್ಲಿ ಜಾರ್ಖಂಡ್‌ನಲ್ಲಿ ಮೂರನೇ ದೊಡ್ಡ ರೈಲು ಅಪಘಾತ ಕಳೆದ ಆರು ತಿಂಗಳಲ್ಲಿ ಜಾರ್ಖಂಡ್‌ನಲ್ಲಿ ಇದು ಮೂರನೇ ದೊಡ್ಡ ರೈಲು ಅಪಘಾತವಾಗಿದೆ. ಜನವರಿ 18, 2024 ರಂದು, ಗಮ್ಹಾರಿಯಾ ರೈಲು ನಿಲ್ದಾಣದಲ್ಲಿ ಉತ್ಕಲ್ ಎಕ್ಸ್‌ಪ್ರೆಸ್ ಬಡಿದು ನಾಲ್ಕು ಜನರು ಸಾವನ್ನಪ್ಪಿದರು. ಫೆಬ್ರವರಿ 28, 2024 ರಂದು, ಜಮ್ತಾರಾ ಮತ್ತು ವಿದ್ಯಾಸಾಗರ್ ನಿಲ್ದಾಣಗಳ ನಡುವೆ ಮತ್ತೊಂದು ರೈಲು ಅಪಘಾತ ಸಂಭವಿಸಿದೆ, ಇದರ ಪರಿಣಾಮವಾಗಿ ಇಬ್ಬರು ಸಾವನ್ನಪ್ಪಿದರು. ಚಕ್ರಧರಪುರದಲ್ಲಿ ಇಂದು ಸಂಭವಿಸಿದ ಹಳಿತಪ್ಪಿ ಇದುವರೆಗೆ ಇಬ್ಬರು ವ್ಯಕ್ತಿಗಳ ಜೀವವನ್ನು ಬಲಿ ತೆಗೆದುಕೊಂಡಿದೆ.

**ಸಹಾಯವಾಣಿ ಆರಂಭಿಸಿದ ರೈಲ್ವೆ:** ಮಂಗಳವಾರ ಜಾರ್ಖಂಡ್‌ನ ಚಕ್ರಧರಪುರ ಬಳಿ ಹೊವಾರಾ–ಸಿಎಸ್‌ಎಂಟಿ ಎಕ್ಸ್‌ಪ್ರೆಸ್ (12810) ಹಳಿತಪ್ಪಿದ ನಂತರ ರೈಲ್ವೆ ಸಚಿವಾಲಯವು ಸಹಾಯವಾಣಿ ಸಂಖ್ಯೆಗಳನ್ನು ಬಿಡುಗಡೆ ಮಾಡಿದೆ. ಸಹಾಯವಾಣಿ ಸಂಖ್ಯೆಗಳಲ್ಲಿ ವಾಣಿಜ್ಯ ನಿಯಂತ್ರಣ ಟಾಟಾನಗರ (06572290324), ಚಕ್ರಧರ್‌ಪುರ (06587 238072), ರೂರ್ಕೆಲಾ (06612501072, 06612500244), ರಾಂಚಿ (0651278711) ಮತ್ತು ಹೌರಾ (94333739333357393335732).

ಎಚ್‌ಡಬ್ಲ್ಯೂಎಚ್ ಹೆಲ್ಪ್ ಡೆಸ್ಕ್‌ನ ಸಹಾಯವಾಣಿ ಸಂಖ್ಯೆಗಳು: 033–26382217, 9433357920, SHM ಹೆಲ್ಪ್ ಡೆಸ್ಕ್: 6295531471, 7595074427, KGP ಸಹಾಯ ಕೇಂದ್ರ: 03222–293764, No3CSMT590 0, ಮುಂಬೈ: 022–22694040 ಮತ್ತು ನಾಗ್ಪುರ: 7757912790 ಸಹ ನೀಡಲಾಗಿದೆ.

### ಶಾಂತಣ್ಣ ಅಡಿವೆಪ್ಪ ಮಾಳವಾಡ ಸೇವಾ ನಿವೃತ್ತಿ ಅಭಿನಂದನಾ ಸಮಾರಂಭದ ಪ್ರಯುಕ್ತ ಲೇಖನ

# ಸ್ನೇಹಮಯಿ ವ್ಯಕ್ತಿತ್ವದ ಶಾಂತಣ್ಣ



ಸವಾಜಮುಖಿಯಾಗಿ, ಸದಾ ಹಸನ್ಮುಖಿಯಾಗಿ ತಮ್ಮ ಸಹೋದ್ಯೋಗಿಗಳೊಂದಿಗೆ ಸ್ನೇಹಮಯಿಯಾಗಿರುವ ಶಾಂತಣ್ಣ ಅಡಿವೆಪ್ಪ ಮಾಳವಾಡ 22/7/1964ರಂದು ಗದುಗಿನಲ್ಲಿ ಜನಿಸಿದರು. ಇವರ ಶೈಕ್ಷಣಿಕ ವಿದ್ಯಾಭ್ಯಾಸವು ಗದಗನಲ್ಲಿಯೇ ಪೂರೈಸಿ, ನಂತರ ವೃತ್ತಿ, ಉಪಜೀವನಕ್ಕಾಗಿ ಪ್ರಪ್ರಥಮವಾಗಿ ತಮ್ಮ ಕಾರ್ಯವೃತ್ತಿಯನ್ನು ಕೆಎಸ್‌ಆರ್‌ಟಿಸಿಯಲ್ಲಿ ಚಾಲಕರಾಗಿ ತಮ್ಮ ಸೇವಾವೃತ್ತಿಯಲ್ಲಿ ಸೇರಿಕೊಂಡರು. ಇವರು ಶಿರಸಿ ವಿಭಾಗದ ಹಳಿಯಾಳ ಘಟಕದಲ್ಲಿ ತಮ್ಮ ಪ್ರಾರಂಭಿಕ ಅವಧಿಯ 1993ರಿಂದ 1996ರವರೆಗೆ ಸೇವೆ ಸಲ್ಲಿಸಿದರು.

ತಮ್ಮ ಸೇವಾವಧಿಯಲ್ಲಿ ಹಿರಿ–ಕಿರಿಯ ಅಧಿಕಾರಿಗಳೊಂದಿಗೆ ಸಹೋದರ ಭಾವತ್ವವನ್ನು ಹೊಂದಿ ಸರ್ವರ ಪ್ರೀತಿ ಪಾತ್ರರಾಗಿ ತಮ್ಮ ಪ್ರಾರಂಭಿಕ ವೃತ್ತಿ ಜೀವನದಲ್ಲಿ ಒಳ್ಳೆಯ ಹೆಸರನ್ನು ಪಡೆದು, ತದನಂತರ 1996ರಲ್ಲಿ ವರ್ಗಾವಣೆಗೊಂಡು ಗದಗ ವಿಭಾಗೀಯ ಕೇಂದ್ರ ಕಚೇರಿಯ ಉಗ್ರಾಣ ವಿಭಾಗದಲ್ಲಿ ಸುದೀರ್ಘ 31 ವರ್ಷ 6 ತಿಂಗಳ ಕಾಲ ಸೇವೆ ಸಲ್ಲಿಸಿದ್ದಾರೆ. ಇವರ ಸೇವಾವಧಿಯಲ್ಲಿ ರಸ್ತೆ ಸಾರಿಗೆಯಲ್ಲಿ ನಿರಂತರ ಅಪಘಾತ ರಹಿತ ಚಾಲನೆ ಮಾಡಿ ಸೇವೆಯನ್ನು ಒದಗಿಸಿದ ಪ್ರಯುಕ್ತ 2004ರಲ್ಲಿ ಸಾರಿಗೆ ಸಂಸ್ಥೆಯಿಂದ ಬೆಳ್ಳಿ ಪದಕದೊಂದಿಗೆ ಪುರಸ್ಕೃತರಾಗಿದ್ದಾರೆ.

ಇವರು 31.7.2007ರಲ್ಲಿ ಕೆಎಸ್‌ಆರ್‌ಟಿಸಿ ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್‌ನಲ್ಲಿ ಗದಗ ವಿಭಾಗದ ಉಪಾಧ್ಯಕ್ಷರಾಗಿ ಅಧಿಕಾರವಹಿಸಿಕೊಂಡು ಸದರ ಸಂಘಟನೆಯಲ್ಲಿ ಸಮಸ್ತ ವೃತ್ತಿ ಬಾಂಧವರನ್ನು ಒಗ್ಗೂಡಿಸಿಕೊಂಡು ಸಹೋದ್ಯೋಗಿಗಳ ಕುಂದು–ಕೊರತೆಗಳಿಗೆ ಸೂಕ್ತ ಪರಿಹಾರವನ್ನು ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಇವರ ಸಂಘಟನಾಸಕ್ತಿಯನ್ನು ಪರಿಗಣಿಸಿ ಶಾಂತಣ್ಣನವರನ್ನು ಕೆಎಸ್‌ಆರ್‌ಟಿಸಿ ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್‌ನ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು.

8.12.2022ರಲ್ಲಿ ಕೇಂದ್ರೀಯ ಎಆಯ್‌ಟಿಯುಸಿ ಯೂನಿಯನ್‌ನಲ್ಲಿ ಕಾರ್ಯನಿರ್ವಾಹಿಸಿದ್ದಾರೆ. ಇವರು ತಮ್ಮ ಸೇವಾವಧಿಯಲ್ಲಿ ಸಂಸ್ಥೆಯ ಸಿಬ್ಬಂದಿಗಳಲ್ಲಿ ಉಂಟಾಗುವ ಸಂಕಷ್ಟಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ಪಾರದರ್ಶಕವಾಗಿ, ಕಾನೂನುಬದ್ಧವಾದ ಸಲಹೆಗಳನ್ನು ನೀಡಿ ಉತ್ತಮ ಜನಸ್ಪಂದನೆಯನ್ನು ನೀಡಿದ ಕೀರ್ತಿಗೆ ಪಾತ್ರರಾಗಿದ್ದಾರೆ.

ಇವರ ಸ್ನೇಹಮಯ ಪ್ರವೃತ್ತಿ, ಸರಳ ಸಜ್ಜನಿಕೆಯ ಶಾಂತಸ್ವಭಾವ ಎಲ್ಲರೂ ನಮ್ಮವರೇ ಎನ್ನುವ ಮನೋಭಾವನೆಯಿಂದ ಸಮಸ್ತ ಇಲಾಖೆಯ ಸಿಬ್ಬಂದಿ ವರ್ಗದವರಲ್ಲಿ ಪ್ರೀತಿಪಾತ್ರರಾಗಿದ್ದಾರೆ. ಇವರ ಸರಳ ಸಜ್ಜನಿಕೆಯ ಸ್ವಭಾವದಿಂದಾಗಿ ಸಮಸ್ತ ಸಿಬ್ಬಂದಿವರ್ಗದವರಲ್ಲಿ ಹಾಗೂ ಗದಗ ಜಿಲ್ಲೆಯಾದ್ಯಂತ ಚಿರಪರಿಚಿತರಾಗಿದ್ದಾರೆ. ಅದರಂತೆ ಧಾರ್ಮಿಕ ಕ್ಷೇತ್ರದಲ್ಲಿಯೂ ತಮ್ಮ ಸೇವೆಯನ್ನು ಸಲ್ಲಿಸಿದ್ದಾರೆ. ಪ್ರಮುಖವಾಗಿ, ದುರ್ಗಾದೇವಿ ದೇವಸ್ಥಾನದಲ್ಲಿ ಹಲವಾರು ವರ್ಷಗಳಿಂದ ಸೇವೆಯನ್ನು ಸಲ್ಲಿಸಿದ್ದಾರೆ.

ಶಾಂತಣ್ಣ ಅಡಿವೆಪ್ಪ ಮಾಳವಾಡರು ಇಂದು ಸೇವಾನಿವೃತ್ತಿ ಹೊಂದುತ್ತಿದ್ದಾರೆ. ಅವರ ನಿವೃತ್ತ ಜೀವನವು ಸುಖಮಯವಾಗಿ, ಸಂತೋಷದಿಂದ ಕೂಡಿರಲಿ.

ಶ್ರೀ ದೇವರು ಮುಳವಾಡರಿಗೆ ಉತ್ತಮ ಆರೋಗ್ಯ–ಆಯಸ್ಸು ಕರುಣಿಸಲಿ ಎಂದು ಎಸ್‌ಆರ್‌ಟಿಸಿ ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್ ಗದಗ ವಿಭಾಗದ ಸರ್ವ ಸದಸ್ಯರು ಶ್ರೀ ದೇವರಲ್ಲಿ ಪ್ರಾರ್ಥಿಸಿದ್ದಾರೆ.

**– ಚಾಂದಸಾಬ್ ಕೊಟ್ಟೂರ.**



**ನಗರಸಭೆಯ ಮಾಜಿ ನಾಮನಿರ್ದೇಶಿತ ಸದಸ್ಯರು.**

# ಸರಕಾರ ಯಾರ ಹಿತಾಸಕ್ತಿ ಕಾಪಾಡುತ್ತಿದೆ?

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶ್ಯಾಮ್ ಪ್ರಸಾದ್ ಶಾಸ್ತ್ರಿ ಆತ್ಮಹತ್ಯೆ ಪ್ರಕಾರಣಕ್ಕೆ ಸಂಬಂಧಿಸಿದಂತೆ 1ನೇ ಆರೋಪಿ ರಾಮಚಂದ್ರಪುರ ಮಠದ ರಾಘವೇಶ್ವರ ಭಾರತಿ ಸ್ವಾಮೀಜಿ ಮತ್ತು 3ನೇ ಆರೋಪಿ ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಭಟ್ ವಿರುದ್ಧದ ಚಾರ್ಜ್ ಶೀಟ್ ಮೇಲ್ಮನವಿಯನ್ನು ಮಾಡಲು ಅರ್ಹ ಪ್ರಕರಣವಲ್ಲ ಎನ್ನುತ್ತಾ ಸರಕಾರ ರದ್ದು ಮಾಡಿ ಕೈ ತೊಳೆದುಕೊಂಡಿದೆ. ಇದರಿಂದ ಸರಕಾರ ಯಾರ ಹಿತವನ್ನು ಕಾಪಾಡುತ್ತದೆ ಎಂದು ಪ್ರಶ್ನಿಸುವಂತಾಗಿದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಕರ್ನಾಟಕ ರಾಜ್ಯ ಅಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಪುನೀತ್ ಕೆರೆಹಳ್ಳಿಯಂತಹ ಸಮಾಜ ಘಾತುಕರು ಕಾನೂನು ಕೈಗೆತ್ತಿಕೊಳ್ಳಲು ಸರಕಾರದ ಇಂಥ ನಿರ್ಧಾರಗಳು ಕಾರಣ. ಕಾಂಗ್ರೆಸ್ ಕೋಮುವಾದಿಗಳಿಗೆ ಹಿತಕಾರಿಯಾಗಿ ವರ್ತಿಸುತ್ತಿದೆ. ಈ ಪ್ರಕರಣಗಳನ್ನು ಗಮನಿಸಿದರೆ ಸರಕಾರ ಯಾರ ಹಿತಾಸಕ್ತಿ ಕಾಪಾಡುತ್ತಿದೆ ಎಂದು ಅರ್ಥವಾಗುತ್ತದೆ. ತಮ್ಮನ್ನು ಚುನಾಯಿಸಿದ ಮತದಾರರಿಗೆ ದ್ರೋಹ ಬಗೆಯದೆ ಸರಕಾರ ತನ್ನ ಕರ್ತವ್ಯ ನಿರ್ವಹಿಸಲು ಮುಂದಾಗಬೇಕೆಂದು ಅವರು ಆಗ್ರಹಿಸಿದ್ದಾರೆ.

## ಡಿ.ಕೆ. ಶಿವಕುಮಾರ್ ಆದೇಶದ ಮೇರೆಗೆ ಬಿ.ವೈ.ವಿಜಯೇಂದ್ರ ಪಾದಯಾತ್ರೆ: ಯತ್ನಾಳ್ ಬಾಂಬ್



■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲು ಡಿ ಕೆ ಶಿವಕುಮಾರ್ ಸಲಹೆ ಮೇರೆಗೆ ಬಿ ವೈ ವಿಜಯೇಂದ್ರ ಪಾದಯಾತ್ರೆ ಮಾಡುತ್ತಿದ್ದಾರೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಾಂಬ್ ಸಿಡಿಸಿದ್ದಾರೆ.

ಬೆಳಗಾವಿಯಲ್ಲಿ ಸುದ್ದಿಗಾರರ ಜೊತೆ ಮಂಗಳವಾರ ಮಾತನಾಡಿ, "ಡಿ ಕೆ ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಲು ಬಿ ವೈ ವಿಜಯೇಂದ್ರ ಕೈಜೋಡಿಸಿದ್ದಾರೆ" ಎಂದು ದೂರಿದರು.

"ಡಿ ಕೆ ಶಿವಕುಮಾರ್ ಆದೇಶದಂತೆ ಸಿದ್ದರಾಮಯ್ಯ ವಿರುದ್ಧ ವಿಜಯೇಂದ್ರ ಪಾದಯಾತ್ರೆ ಮಾಡಲು ಸಿದ್ಧರಾಗಿದ್ದಾರೆ. ಈ ಪಾದಯಾತ್ರೆ ಹೊಂದಾಣಿಕೆ ರಾಜಕಾರಣವಾಗಿದೆ. ಡಿ ಕೆ ಶಿವಕುಮಾರ್ ಅವರ ಉಪಕಾರ ತೀರಿಸಲಿಕ್ಕೆ ವಿಜಯೇಂದ್ರ ಪಾದಯಾತ್ರೆ ಮಾಡುತ್ತಿದ್ದಾರೆ" ಎಂದರು.

"ಮುಡಾ ಮಾಜಿ ಅಧ್ಯಕ್ಷ ಹೆಚ್ ವಿ ರಾಜೀವ್ ಬಿಜೆಪಿಯಲ್ಲೇ ಇದ್ದಾಗ ಈ ಹಗರಣ ನಡೆದಿದೆ. ಈಗ ಅವರು ಕಾಂಗ್ರೆಸ್ ಸೇರಿದ್ದಾರೆ. ಕಾಂಗ್ರೆಸ್ ಯಾಕೆ ಸೇರಿದ್ದಾರೆ ಅಂದರೆ ಇದೆಲ್ಲ ಮುಚ್ಚಿ ಹಾಕಲು. ರಾಜೀವ್ ಯಾರ ನಿರ್ದೇಶನದ ಮೇಲೆ ಕಾಂಗ್ರೆಸ್ ಸೇರಿದ್ದಾರೆ ಎನ್ನುವುದು ಎಲ್ಲರಿಗೂ ಗೊತ್ತಿದೆ. ನನಗಿರುವ ಮಾಹಿತಿ ಪ್ರಕಾರ ಮುಡಾ ವಿಚಾರ ವಿಜಯೇಂದ್ರ ನಡೆಸುತ್ತಿರುವ ಹೋರಾಟದ ಹಿಂದೆ ಡಿ ಕೆ ಶಿವಕುಮಾರ್ ಕೈವಾಡವಿದೆ" ಎಂದು ಗಂಭೀರವಾಗಿ ಆರೋಪಿಸಿದರು.

"ನಾವು ಮತ್ತು ರಮೇಶ್ ಜಾರಕಿಹೊಳಿ ಕೇಂದ್ರದಿಂದ ಒಪ್ಪಿಗೆ ಪಡೆದು ಪ್ರತಿಭಟನೆ ಮಾಡುತ್ತಿದ್ದೇವೆ. ಆದರೆ ಎಲ್ಲಿಂದ ಪ್ರತಿಭಟನೆ ಮಾಡಬೇಕೆಂದು ಇನ್ನೂ ನಿರ್ಣಯವಾಗಿಲ್ಲ. ಬಿಜೆಪಿಯಲ್ಲಿ ಎರಡು ಬಣ ಇಲ್ಲ. ನಮ್ಮ ಪ್ರತಿಭಟನೆ ಪಕ್ಷದ ಪ್ರತಿಭಟನೆ" ಎಂದು ಹೇಳಿದರು.

"ಮಹರ್ಷಿ ವಾಲ್ಮೀಕಿ ನಿಗಮದಲ್ಲೂ ದೊಡ್ಡ ಹಗರಣ ನಡೆದಿದೆ. ಒಂದು ಸಮುದಾಯದಕ್ಕೆ ಹೋಗಬೇಕಾದ ಹಣ ಪೂರ್ತಿ ನುಂಗಿ ಹಾಕಿದ್ದಾರೆ. ಇನ್ನೊಂದು ಕಡೆ ಮುಡಾದಲ್ಲಿ ಒಬ್ಬ ದಲಿತನ ಜಮೀನು ಪೂರ್ತಿ ನುಂಗಿ ಹಾಕಿದ್ದಾರೆ. ಕಾಂಗ್ರೆಸ್ ಭ್ರಷ್ಟಾಚಾರ ವಿರುದ್ಧ ಯಾವುದೇ ಒಳ ಒಪ್ಪಂದ ಇಲ್ಲದೇ ನಾವು ಹೋರಾಟ ಮಾಡುತ್ತಿದ್ದೇವೆ. ನಮ್ಮ ಹೋರಾಟ ಭ್ರಷ್ಟರ ವಿರುದ್ಧ" ಎಂದು ತಿಳಿಸಿದರು.

# ಕಾರ್ಗಿಲ್ ವಿಜಯೋತ್ಸವದ ಅಂಗವಾಗಿ ಮ್ಯಾರಥಾನ್

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಗಿಲ್ ವಿಜಯೋತ್ಸವದ ಅಂಗವಾಗಿ ಯುವಾ ಬ್ರಿಗೇಡ್, ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಸಂಯುಕ್ತಾಶ್ರಯದಲ್ಲಿ ಟಾರ್ಗೆಟ್ ಫಾರ್ ಪಿಓಕೆ ಮ್ಯಾರಥಾನ್ ಅಭಿಯಾನ ಮುನ್ಸಿಪಲ್ ಮೈದಾನದಿಂದ ಆರಂಭವಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ಯುವ ಬ್ರಿಗೇಡ್ ಸಂಚಾಲಕ ಮಂಜುನಾಥ್ ಜಕ್ಕಲಿ, 1999ರಲ್ಲಿ ಭಾರತ–ಪಾಕ್ ನಡುವೆ ನಡೆದ ಕಾರ್ಗಿಲ್ ಯುದ್ಧದಲ್ಲಿ ನಮ್ಮ ದೇಶವು ಗೆಲುವು ಸಾಧಿಸಿ ಇಂದಿಗೆ 25 ವರ್ಷಗಳಾದವು. ಈ ಗೌರವದ ಸ್ಮರಣಾರ್ಥ ದೇಶಾದ್ಯಂತ ಕಾರ್ಗಿಲ್ ವಿಜಯೋತ್ಸವದ ರಜತ ಮಹೋತ್ಸವನ್ನು ಆಚರಿಸಲಾಗುತ್ತಿದೆ ಎಂದರು.

ಉಪನ್ಯಾಸಕ ಪಾಂಡು ಚವ್ಹಾಣ, ಯುವ ಬ್ರಿಗೇಡ್ ಕಾರ್ಯಕರ್ತ ವಿನಾಯಕ ಹೊರಕೇರಿ, ಮಂಜು ಹಿಂಡಿ ಮಾತನಾಡಿದರು. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ವಿರಯೋಧರಾದ ಮಲ್ಲೇಶಪ್ಪ ಕೊಣ್ಣೂರ, ಮಲ್ಲಿಕಾರ್ಜುನ ಎಂ, ವೀರಣ್ಣ ಚೆಕರೆಡ್ಡಿ, ರವೀಂದ್ರ, ಇಂದಿರಾ ಹೆಬಸುರ, ಎನ್.ಆರ್. ದೇವಾಂಗಮಠ, ಚೆನ್ನಪ್ಪ, ಶಂಕ್ರಪ್ಪ, ವೆಂಕಪ್ಪ, ಯುವಾ ಬ್ರಿಗೇಡ್‌ನ ಪ್ರಮುಖರಾದ ಕುಮಾರ ಜಕ್ಕಲಿ, ಮಂಜು ಜಕ್ಕಲಿ, ವಿನಾಯಕ ಮಾದಗುಂಡಿ, ಬಸು ಗವಿಮಠ, ವಿನಾಯಕ ಹೊರಕೇರಿ, ಸಂಗಮೇಶ ಹಡಪದ್, ರವಿ ಕರ್ಚಣ್ಣವರ ಸೇರಿದಂತೆ ನಿವೃತ್ತ ಯೋಧರು, ಯುವಾ ಬ್ರಿಗೇಡ್‌ನ ಕಾರ್ಯಕರ್ತರು, ವಿದ್ಯಾರ್ಥಿಗಳು ಇದ್ದರು.

### ವಯನಾಡ್ ಭೂಕುಸಿತ ದುರಂತ

# ಕೇರಳದಲ್ಲಿ 2 ದಿನ ಶೋಕಾಚರಣೆ ಘೋಷಿಸಿದ ಸಿಎಂ ಪಿಣರಾಯಿ ವಿಜಯನ್

■ವಿಜಯಸಾಕ್ಷಿ ಸುದ್ದಿ, ವಯನಾಡ್

ಜಿಲ್ಲೆಯಲ್ಲಿ ವಿವಿಧ ಭಾಗಗಳಲ್ಲಿ ಭೂಕುಸಿತ ಉಂಟಾಗಿ ಸುಮಾರು 100ರಷ್ಟು ಜನರು ಸಾವನ್ನಪ್ಪಿರುವ ಹಿನ್ನೆಲೆ, ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಎರಡು ದಿನಗಳ ಕಾಲ ರಾಜ್ಯಾದ್ಯಂತ ಶೋಕಾಚರಣೆಯನ್ನು ಘೋಷಿಸಿದ್ದಾರೆ.



ಜುಲೈ 30 ಮಂಗಳವಾರ ಮತ್ತು ಜುಲೈ 31 ಬುಧವಾರದಂದು ಕೇರಳ ಸರ್ಕಾರ ಅಧಿಕೃತ ಶೋಕಾಚರಣೆಯನ್ನು ಘೋಷಿಸಿದೆ. ಈ ಸಂದರ್ಭ ರಾಜ್ಯದ ಎಲ್ಲಾ ಕಡೆಗಳಲ್ಲಿ ರಾಷ್ಟ್ರಧ್ವಜ ಅರ್ಧದಲ್ಲಿ ಹಾರಾಡಲಿದೆ. ಈ ಎರಡೂ ದಿನಗಳಂದು ನಡೆಯಬೇಕಿದ್ದ ಎಲ್ಲಾ ಸರ್ಕಾರಿ ಕಾರ್ಯಕ್ರಮಗಳು ಮತ್ತು ಇತರ ಆಚರಣೆಗಳನ್ನು ಮುಂದೂಡಲಾಗಿದೆ.

ಈ ಸುದ್ದಿ ಬರೆಯುವ ಹೊತ್ತಿಗೆ ( ಸಂಜೆ 6 ಗಂಟೆ) ವಯನಾಡ್ ದುರಂತದಲ್ಲಿ ಮೃತರ ಸಂಖ್ಯೆ 93ಕ್ಕೆ ತಲುಪಿತ್ತು.128 ಜನರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು ಮತ್ತು 98 ಮಂದಿ ನಾಪತ್ತೆಯಾಗಿರುವ ಶಂಕೆ ವ್ಯಕ್ತವಾಗಿತ್ತು.

ವರದಿಗಳ ಪ್ರಕಾರ ಸದ್ಯ ದುರಂತ ನಡೆದ ಸ್ಥಳಗಳಲ್ಲಿ ಒಂದಾದ ಮುಂಡಕ್ಕೈನಲ್ಲಿ ಎನ್‌ಡಿಆರ್‌ಎಫ್‌ನ 20 ಸದಸ್ಯರ ತಂಡ ರಕ್ಷಣಾ ಕಾರ್ಯದಲ್ಲಿ ತೊಡಗಿದೆ. ಭೂಕುಸಿತ ಸಂತ್ರಸ್ತರಿಗೆ ಆಹಾರ ಮತ್ತು ಇತರ ಸಾಮಗ್ರಿಗಳ ಪೂರೈಕೆಗೆ ರಾಜ್ಯದ ನಾಗರಿಕ ಸರಬರಾಜು ಇಲಾಖೆ ಕ್ರಮಕೈಗೊಂಡಿದೆ.

## ಹಣ ಅಕ್ರಮ ವರ್ಗಾವಣೆ ಪ್ರಕರಣ : ಎನ್‌ಸಿಪಿ ನಾಯಕ ನವಾಬ್ ಮಲಿಕ್‌ಗೆ ಜಾಮೀನು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಮಹಾರಾಷ್ಟ್ರದ ಮಾಜಿ ಸಚಿವ ನವಾಬ್ ಮಲಿಕ್ ಅವರಿಗೆ ವೈದ್ಯಕೀಯ ಕಾರಣಗಳಿಗಾಗಿ ಸುಪ್ರೀಂ ಕೋರ್ಟ್ ಇಂದು ಜಾಮೀನು ಮಂಜೂರು ಮಾಡಿದೆ.



ನ್ಯಾಯಮೂರ್ತಿಗಳಾದ ಬೇಲಾ ಎಂ ತ್ರಿವೇದಿ ಮತ್ತು ಸತೀಶ್ ಚಂದ್ರ ಶರ್ಮಾ ಅವರ ಪೀಠವು, ಮಲಿಕ್ ಅವರು ವಿವಿಧ ಕಾಯಿಲೆಗಳಿಂದ ಬಳಲುತ್ತಿದ್ದಾರೆ ಎಂದು ಅವರ ಪರ ವಕೀಲರ ವಾದವನ್ನು ಮಾನ್ಯ ಮಾಡಿದೆ.

ಬಾಂಬೆ ಹೈಕೋರ್ಟ್ ಸಾಮಾನ್ಯ ಜಾಮೀನು ಅರ್ಜಿಯನ್ನು ವಿಲೇವಾರಿ ಮಾಡುವವರೆಗೆ ಮಲಿಕ್ ಅವರ ವೈದ್ಯಕೀಯ ಜಾಮೀನು ಮಾನ್ಯವಾಗಿರುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

## ಹಸಿ ಸುಳ್ಳು ಹೇಳುತ್ತಿರುವ ನಿಮ್ಮಲ್ಲಿ ನೈತಿಕತೆ ಸತ್ತಿದೆ: ಸಿಎಂ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸುಳ್ಳು ಹೇಳುವುದು ನಿಮಗೆ ಅಭ್ಯಾಸವೋ, ಆಚಾರವೋ, ಚಾಳಿಯೋ ಗೊತ್ತಿಲ್ಲ. ಹಸಿ ಹಸಿ ಸುಳ್ಳು ಹೇಳುತ್ತಿರುವ ನಿಮ್ಮಲ್ಲಿ ನೈತಿಕತೆ ಸತ್ತಿದೆ. ಆರೋಪಿ ಸ್ಥಾನದಲ್ಲಿರುವ ನೀವು ನನ್ನ ಬಗ್ಗೆ, ನನ್ನ ತಂದೆಯವರ ಬಗ್ಗೆ ಆಡುತ್ತಿರುವ ಸುಳ್ಳುಗಳು ನಿಮ್ಮ ಯೋಗ್ಯತೆಗೆ ತಕ್ಕುದಲ್ಲ ಸಿದ್ದರಾಮಯ್ಯನವರೇ. ನಮ್ಮ ಬಗ್ಗೆ ಮಾತನಾಡುವ ಯೋಗ್ಯತೆಯೂ ನಿಮಗಿದೆ ಎಂದು ನನಗೆ ಅನಿಸುವುದಿಲ್ಲ ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಎಕ್ಸ್ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು, "ಮುಡಾದವರು ನನಗೆ ನಿವೇಶನ ಹಂಚಿದ್ದಾರೆ. ಸ್ವಾಧೀನ ಪತ್ರವನ್ನೂ ನೀಡಿದ್ದಾರೆ. ಆ ಪತ್ರವನ್ನು ನಾನು ಮಾಧ್ಯಮಗಳ ಮುಂದೆಯೂ ತೋರಿಸಿದ್ದೇನೆ. ಹಂಚಿದ ನಿವೇಶನದ ಜಾಗವನ್ನು ನನ್ನ ಸುಪರ್ದಿಗೆ ಕೊಡಬೇಕಲ್ಲವೇ? ಕೊಟ್ಟಿಲ್ಲ. ಹಾಗಾದರೆ, ಇದರಲ್ಲಿ ಸಿದ್ದರಾಮಯ್ಯ ಮಾಡಿದ ಸಂಶೋಧನೆ ಏನಿದೆ" ಎಂದು ಪ್ರಶ್ನಿಸಿದ್ದಾರೆ.

"ಸುಳ್ಳು ಸಂಶೋಧಕ ಸಿದ್ದರಾಮಯ್ಯನವರೇ, ನಿಮ್ಮ ಮುಖಕ್ಕೆ ಮೆತ್ತಿಕೊಂಡಿರುವ ಕೊಳಕನ್ನು ನನ್ನ ಮೇಲೆ, ಇನ್ನಿತರರ ಮೇಲೆ ಸಿಡಿಸಲು ಹೊರಟು ಲಜ್ಜೆಗೇಡಿತನದ ಪರಮಾವಧಿ ಮೆರೆದಿದ್ದೀರಿ" ಎಂದು ಟೀಕಿಸಿದ್ದಾರೆ. "ಮುಡಾ ಭೂಮಿಯನ್ನು ಮುಖ್ಯಮಂತ್ರಿ ಕುಟುಂಬ ಮುಕ್ಕಿ ತಿಂದಿದೆ ಎಂದು ಇಡೀ ದೇಶ ಮಾತನಾಡುತ್ತಿದೆ. ದಾಖಲೆಗಳು ಹಾದಿಬೀದಿಯಲ್ಲಿ ಹೊರಳಾಡುತ್ತಿವೆ! ನಿಮ್ಮ ಸಮಾಜವಾದಿ ಮುಖವಾಡ, ಅಹಿಂದಾ ಅಲಂಕಾರ, ಸತ್ಯವಂತನ ಸಿಂಗಾರ, ಇದೆಲ್ಲವೂ ಕಳಚಿಬಿದ್ದಿದೆ. ಅಸಹ್ಯವಾಗುವಷ್ಟು ಅನಾಚಾರ ಮಾಡಿ ಅಹಿಂದ ರಕ್ಷಣೆ ಪಡೆಯಲು ಯತ್ನಿಸುತ್ತಿರುವ ನಿಮ್ಮ ಅಸಹಾಯಕತೆ ನನಗೆ ಅರ್ಥವಾಗುತ್ತದೆ. ಪಾಪ, ನಿಮ್ಮ ಪಕ್ಷದವರೇ ನಿಮಗೆ 'ಶರಪಂಜರ' ಸೃಷ್ಟಿಸುತ್ತಿದ್ದಾರೆ" ಎಂದು ವ್ಯಂಗ್ಯವಾಡಿದ್ದಾರೆ.

"ಕುಮಾರಸ್ವಾಮಿ ರಾಜ್ಯಕ್ಕೆ ಕೈಗಾರಿಕೆ ತರಲಿ, ರಾಜ್ಯಕ್ಕೆ ಒಳ್ಳೆಯದು ಮಾಡಲಿ ಎನ್ನುತ್ತೀರಿ. ಅದು ನನಗೆ ಗೊತ್ತಿದೆ. ನಾನು ಕೇಂದ್ರ ಸಚಿವನಾಗಿ ಇನ್ನೂ ಎರಡು ತಿಂಗಳಾಗಿಲ್ಲ. ರಾಜ್ಯದ ಕೆಲಸ ಮಾಡೋಣ ಎಂದರೆ ನಿಮ್ಮ ಅಸಹಕಾರ, ಅಸೂಯೆ ಅಡ್ಡಿ. ಒಂದು ನಾಲಿಗೆ ಮೇಲೆ ಸಹಕಾರ, ಅಸಹಕಾರ. ಇದು ಹೇಗೆ ಸಾಧ್ಯ ಸಿದ್ದರಾಮಯ್ಯನವರೇ?" ಎಂದಿದ್ದಾರೆ.

### ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಸರಣಿ ಮುಕ್ತಾಯ

# ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಯಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ನಿಂತ ನೀರಲ್ಲ. ವಿದ್ಯಾರ್ಥಿಗಳು ನೂತನ ಆವಿಷ್ಕಾರಗಳನ್ನು ತಮ್ಮ ಶೈಕ್ಷಣಿಕ ಅಧ್ಯಯನದಲ್ಲಿ ಅಳವಡಿಸಿಕೊಳ್ಳುವ ಮೂಲಕ ವೈಜ್ಞಾನಿಕ ಮನೋಭಾವನೆ, ಚಿಂತನೆಗಳನ್ನು ಬೆಳೆಸಿಕೊಳ್ಳಬೇಕೆಂದು ಶಿಕ್ಷಣ ಪ್ರೇಮಿ, ತ್ಯಾಗಜೀವಿ ಶ್ರೀ ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಹೇಳಿದರು.

ಅವರು ಗದಗ ತಾಲೂಕಿನ ಕೋಟುಮಚಗಿ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಮೂರು ಸ್ಥಾನಗಳನ್ನು ಪಡೆದ ಗದಗ ತಾಲೂಕಿನ ಸರಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮಾತನಾಡಿದರು.

ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ ಮಾತನಾಡಿ, ಶಿಕ್ಷಣ ಕಲಿತ ವ್ಯಕ್ತಿ ಎಲ್ಲರಿಂದಲೂ ಎಲ್ಲ ಕಡೆಯೂ ಗೌರವಿಸಲ್ಪಡುತ್ತಾನೆ. ಅದಕ್ಕಾಗಿ ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಲ್ಲಿ ಓದಿನತ್ತ ಗಮನವಿಡಬೇಕು. ಓದು ನಿಮ್ಮನ್ನು ಉನ್ನತಿಗೇರಿಸುತ್ತದೆ ಎಂದರು.



ಪ್ರತಿಷ್ಠಾನದ ಕಾರ್ಯದರ್ಶಿ ಶಿವಪ್ಪ ಕತ್ತಿ, ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ವಿನಾಯಕ ಬಂಡಾಮಾತನಾಡಿದರು.

ಕೋಟುಮಚಗಿ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಲಲಿತಾ ಸಂಕನಗೌಡ್ರ, ಜೀವನಸಾಬ ವಡ್ಡಟ್ಟಿ, ಶಿಲ್ಪಾ ಸಿಂಗಟಾಲಕೇರಿ, ಅನಿತಾ ವಾಲ್ಮೀಕಿ, ತೇಜಸ್ವಿನಿ ತಳವಾರ ಪುರಸ್ಕಾರ ನೀಡಿ ಗೌರವಿಸಲಾಯಿತು.

ನೀರಲಗಿಯ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ನೀಲಮ್ಮ ಇಬ್ರಾಹಿಂಪೂರ, ಪ್ರಥ್ವಿರಾಜ ಹುರಕಡ್ಲಿ, ನಿರ್ಮಲಾ ಪಾಟೀಲ, ಅನೀಲ ಬಾವಿ, ಭಾಗ್ಯಲಕ್ಷ್ಮೀ ಬಡಿಗೇರ ಹಾಗೂ ಕಣಗಿನಹಾಳದ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳಾದ ರೋಪಾ ಮಲಕಶೆಟ್ಟಿ, ಧರ್ಮರಾಜ ಭಜಪ್ಪನವರ, ಸಂಗೀತಾ ಜೀರ್ಲಿ, ಐಶ್ವರ್ಯ ಆವಾರಿ, ಯಶೋಧಾ ಪಾಟೀಲ ಅವರಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು. ಕಣಗಿನಹಾಳ ಗ್ರಾಮದ ಮೊರಾರ್ಜಿ ವಸತಿ ಶಾಲೆಯ ವಿದ್ಯಾರ್ಥಿಗಳಾದ ಅಭಿಲಾಷಗೌಡ ಕರಕನಗೌಡ್ರ, ರಾಹುಲ್ ಲಮಾಣಿ, ಅನ್ನಪೂರ್ಣ ಮೊರಬದ, ಪ್ರಜ್ವಲ ದಿವಾಣದ, ಗಗನ ನಾಯಕ ಹಾಗೂ ಹಾತಲಗೇರಿ ಗ್ರಾಮದ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳಾದ ಕರಿಯಪ್ಪ ಕುರುಬರ, ರೇಣುಕಾ ಗದಗ, ಗೀತಾ ಜೋಗಿನ, ಸತ್ಯಮ್ಮ ಮುರ್ಲಾಪೂರ, ಚಂದನಾ ಪಾಟೀಲ ಅವರುಗಳಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕಳೆದ 10 ವರ್ಷಗಳಿಂದ ಪ್ರತಿಷ್ಠಾನವು ಪ್ರತಿಭಾ ಪುರಸ್ಕಾರ ನೀಡುತ್ತ ಬಂದಿದ್ದು, ದಾನಿಯೊಬ್ಬರು ಈ ಕಾರ್ಯಕ್ಕೆ ಕೈ ಜೋಡಿಸಿದ್ದರಿಂದ ಪ್ರತಿಷ್ಠಾನಕ್ಕೆ ಬಲ ಬಂದಿದೆ. 30 ಶಾಲೆಗಳಲ್ಲಿ ತಲಾ ಐವರು ಪ್ರತಿಭಾನ್ವಿತರನ್ನು ಸನ್ಮಾನಿಸಿದ್ದು, ಪ್ರತಿಭಾ ಪುರಸ್ಕಾರಕ್ಕಾಗಿ ಒಟ್ಟು 1 ಲಕ್ಷ 20 ಸಾವಿರಕ್ಕೂ ಹೆಚ್ಚು ನಗದು, ಸುಮಾರು 60 ಸಾವಿರ ರೂ. ಮೌಲ್ಯದ ಬ್ಯಾಗ್, ಪ್ರಮಾಣಪತ್ರ ಹಾಗೂ ಅರ್ಧ ಕ್ವಿಂಟಲ್‌ಗಿಂತಲೂ ಹೆಚ್ಚು ಪ್ರಮಾಣದ ಧಾರವಾಡ ಪೇಡಾವನ್ನು ಈ ಕಾರ್ಯಕ್ಕೆ ಬಳಕೆ ಮಾಡಲಾಗಿದೆ ಎಂದು ಶಿವಕುಮಾರ ಎಚ್.ಪಾಟೀಲ ತಿಳಿಸಿದರು.

ಪ್ರತಿಷ್ಠಾನದ ಗೌರವ ಅಧ್ಯಕ್ಷರಾದ ಪೂಜ್ಯ ಜ.ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಕೃಪಾಶೀರ್ವಾದಿಂದ ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ, ಕಾರ್ಯದರ್ಶಿ ಶಿವಪ್ಪ ಕತ್ತಿ, ಖಜಾಂಚಿ ಸಿದ್ಧಲಿಂಗನಗೌಡ ಪಾಟೀಲ, ನಿರ್ದೇಶಕರಾದ ಶಿವಾನಂದ ದಂಡಿನ, ವಿರುಪಾಕ್ಷಪ್ಪ ವ್ಯಾಗೇರಿ, ಚನ್ನಪ್ಪ ಮಲ್ಲಾಡದ, ತೋಂಟೇಶ ವೀರಲಿಂಗಯ್ಯನಮಠ, ವಿರುಪಾಕ್ಷಪ್ಪ ಶಾಂತಗೇರಿ, ಕಳಕಪ್ಪ ಕುರ್ತಕೋಟಿ ಸಹಕರಿಸಿದರು.

# ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2024ರ sslc ಪರೀಕ್ಷೆ-3 ಪರೀಕ್ಷೆಗಳನ್ನು ಆಗಸ್ಟ್ 2 ರಿಂದ 9 ರವರೆಗೆ ಬೆಳಿಗ್ಗೆ 10.15 ಗಂಟೆಯಿಂದ ಮಧ್ಯಾಹ್ನ 1.45 ಗಂಟೆಯವರೆಗೆ ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 11 ಪರೀಕ್ಷಾ ಕೇಂದ್ರಗಳ ಸುತ್ತಲೂ ಆಗಸ್ಟ್ 2 ರಿಂದ 9 ರವರೆಗೆ 200 ಮೀಟರ್ ಪರಿಮಿತಿಯೊಳಗೆ ಬೆಳಿಗ್ಗೆ 9.30 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾ-ಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದೆ.

ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೆ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

# ಸಂಗೀತ ಪರೀಕ್ಷಾ ಕೇಂದ್ರ ಸ್ಥಳಾಂತರ ಖಂಡನೀಯ

■ವಿಜಯಸಾಕ್ಷಿ ಸುದ್ದಿ, ಗದಗ



ಸಂಗೀತ ಪರೀಕ್ಷಾ ಕೇಂದ್ರವನ್ನು ಗದಗದಿಂದ ಹುಬ್ಬಳ್ಳಿಗೆ ಸ್ಥಳಾಂತರ ಮಾಡಿರುವುದು ಖಂಡನೀಯ ಎಂದು ಹಿರಿಯ ಮುಖಂಡರಾದ ಮುರಿಗೆಪ್ಪ ಶೆಟ್ಟರ್ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಂಧ, ಅನಾಥ ಮಕ್ಕಳಿಗೆ ನಂದಾದೀಪವಾಗಿರುವ ಶ್ರೀ ವೀರೇಶ್ವರ ಪುಣ್ಯಾಶ್ರಮದ ಅಂಧ ಮಕ್ಕಳಿಗೆ ಅನುಕೂಲವಾಗುವಂತೆ ಈ ಪರೀಕ್ಷೆಯನ್ನು ಗದುಗಿನಲ್ಲಿಯೇ ನಡೆಸಬೇಕು. ಈ ಪುಣ್ಯಾಶ್ರಮವು ಸಂಗೀತ ಕಾಶಿ ಎನಿಸಿಕೊಂಡಿದೆ. ಪರೀಕ್ಷಾ ಕೇಂದ್ರವನ್ನು ಗದಗ ಜಿಲ್ಲಾ ಕೇಂದ್ರದಿಂದ ಹುಬ್ಬಳ್ಳಿಗೆ ಸ್ಥಳಾಂತರ ಮಾಡಿರುವುದರಿಂದ ಅಂಧ, ಅನಾಥ, ಬಡ ಮಕ್ಕಳಿಗೆ ತೊಂದರೆಯಾಗಲಿದೆ ಎಂದು ತಿಳಿಸಿದ್ದಾರೆ.

### ಅತ್ಯಾಚಾರ ಸಂತ್ರಸ್ತೆಯನ್ನು ಮಹಿಳಾ ವೈದ್ಯರೇ ಪರೀಕ್ಷಿಸುವಂತೆ ಕಾನೂನಿಗೆ ತಿದ್ದುಪಡಿ ತನ್ನಿ: ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ವಯಸ್ಕ ಸಂತ್ರಸ್ತೆಯರ ಖಾಸಗಿತನದ ಹಕ್ಕನ್ನು ರಕ್ಷಿಸುವ ಸಲುವಾಗಿ ಅವರ ಆರೋಗ್ಯ ತಪಾಸಣೆಯನ್ನು ಮಹಿಳಾ ವೈದ್ಯರೇ ನಡೆಸಲು ಅವಕಾಶ ಕಲ್ಪಿಸುವ ಸಲುವಾಗಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಗೆ (ಬಿಎನ್‌ಎಸ್‌ಎಸ್) ತಿದ್ದುಪಡಿ ತರುವಂತೆ ಕೇಂದ್ರ ಸರ್ಕಾರಕ್ಕೆ ಕರ್ನಾಟಕ ಹೈಕೋರ್ಟ್ ನಿರ್ದೇಶಿಸಿದೆ.

ಲೈಂಗಿಕ ದೌರ್ಜನ್ಯ ಆರೋಪ ಎದುರಿಸುತ್ತಿರುವ ಬಿಹಾರ ಮೂಲದ ಅಜಯ್ ಕುಮಾರ್ ಬೆಹೆರಾ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ತಿರಸ್ಕರಿಸುವ ವೇಳೆ ನ್ಯಾಯಮೂರ್ತಿ ಎಂ ಜಿ ಉಮಾ ಅವರ ಏಕಸದಸ್ಯ ಪೀಠ ಕೇಂದ್ರ ಸರ್ಕಾರಕ್ಕೆ ಕೆಲ ಸೂಚನೆಗಳನ್ನು ನೀಡಿದೆ.

ಬಿಎನ್‌ಎಸ್‌ಎಸ್‌ನ ಸೆಕ್ಷನ್ 184ಕ್ಕೆ ಸೂಕ್ತ ತಿದ್ದುಪಡಿ ಮಾಡುವವರೆಗೆ ಅತ್ಯಾಚಾರ ಸಂತ್ರಸ್ತೆಯರ ವೈದ್ಯಕೀಯ ಪರೀಕ್ಷೆಯನ್ನು ನೋಂದಾಯಿತ ಮಹಿಳಾ ವೈದ್ಯಾಧಿಕಾರಿ ಮಾಡುವುದನ್ನು ಖಾತರಿಪಡಿಸುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ನ್ಯಾಯಾಲಯ ನಿರ್ದೇಶಿಸಿದೆ.

ಬಿಎನ್‌ಎಸ್‌ಎಸ್ ಸೆಕ್ಷನ್ 184 ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ವಯಸ್ಕ ಮಹಿಳೆಯರ ವೈದ್ಯಕೀಯ ಪರೀಕ್ಷೆಗೆ ಸಂಬಂಧಿಸಿದ್ದು, ಈಗ ಹಿಂಪಡೆಯಲಾಗಿರುವ ಸಿಆರ್‌ಪಿಸಿಯ 164ಎ ಅನ್ನು ಅಕ್ಷರಶಃ ನಕಲು ಮಾಡಲಾಗಿದೆ ಎಂದು ಪೀಠ ಹೇಳಿದೆ. ಹೊಸ ಮತ್ತು ಹಳೆಯ ಎರಡೂ ಸೆಕ್ಷನ್‌ಗಳಲ್ಲಿ ಸಂತ್ರಸ್ತೆಯ ಪರೀಕ್ಷೆಯನ್ನು ಮಹಿಳೆ ಅಥವಾ ಪುರುಷ ವೈದ್ಯಾಧಿಕಾರಿ ಮಾಡಬೇಕು ಎಂದು ಹೇಳಲಾಗಿದೆ ಎಂದು ನ್ಯಾಯಾಲಯ ವಿವರಿಸಿದೆ.

ಬಿಎನ್‌ಎಸ್‌ಎಸ್ ಮತ್ತು ಸಿಆರ್‌ಪಿಸಿಯ ಎರಡೂ ಸೆಕ್ಷನ್‌ಗಳು ಪೋಕ್ಸೊ ಕಾಯ್ದೆಯ ನಿಬಂಧನೆಗಳಿಗೆ ತದ್ವಿರುದ್ಧವಾಗಿದೆ.

ಪೋಕ್ಸೊ ಕಾಯ್ದೆಯಲ್ಲಿ ಅಪ್ರಾಪ್ತ ಸಂತ್ರಸ್ತೆಯರ ವೈದ್ಯಕೀಯ ಪರೀಕ್ಷೆಯನ್ನು ಮಹಿಳಾ ವೈದ್ಯಾಧಿಕಾರಿ ಮಾತ್ರ ಮಾಡಬೇಕು ಎಂದು ಹೇಳಲಾಗಿದೆ.

# ಕ್ರೀಡಾಕೂಟದಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದ ವೆಂಕಟೇಶ್ವರ ಪ್ರೌಢಶಾಲೆಯಲ್ಲಿ ಜರುಗಿದ 2024-25ನೇ ಸಾಲಿನ ಹೊಂಬಳ ವಲಯ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟದಲ್ಲಿ ಹಿರೇಹಂದಿಗೋಳ ಗ್ರಾಮದ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿನಿ ಕವಿತಾ ಕರಬಸಪ್ಪ ಕುರ್ತಕೋಟಿ 200 ಮೀಟರ್ ಓಟದಲ್ಲಿ ಪ್ರಥಮ, 800ಮೀ. ಓಟದಲ್ಲಿ ಪ್ರಥಮ ಹಾಗೂ 3000 ಮೀ. ಓಟದಲ್ಲಿ ಪ್ರಥಮ ಸ್ಥಾನವನ್ನು ಪಡೆದು ವೈಯಕ್ತಿಕ ವೀರಾಗ್ರಣಿ ಆಗಿ ಹೊರಹೊಮ್ಮಿದ್ದಾಳೆ.

ಗುಂಪು ಆಟಗಳಾದ ಕಬಡ್ಡಿ, ಥ್ರೋಬಾಲ್‌ನಲ್ಲಿ ಬಾಲಕಿಯರು ಪ್ರಥಮ ಸ್ಥಾನ ಗಳಿಸಿದರೆ, ಖೋ ಖೋ ಆಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.



ಈ ಶಾಲೆಯ ವಿದ್ಯಾರ್ಥಿಗಳು ವಿವಿಧ ವೈಯಕ್ತಿಕ ಆಟದಲ್ಲಿ ವಿಜೇತರರಾಗಿ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿ ಶಾಲೆಗೆ, ಗ್ರಾಮಕ್ಕೆ ಕೀರ್ತಿ ತಂದಿದ್ದಾರೆ.

ಕ್ರೀಡಾ ಪ್ರತಿಭೆಗಳಿಗೆ ಹಾಗೂ ತರಬೇತಿ ನೀಡಿದ ದೈಹಿಕ ಶಿಕ್ಷಣ ಶಿಕ್ಷಕಿ ಕೆ.ವಿ. ಚೂರಿ ಅವರಿಗೆ ಗ್ರಾಮದ ಪಂಚಲಿಂಗೇಶ್ವರ ಸದ್ಭಕ್ತ ಮಂಡಳಿ ಹಾಗೂ ಕ್ರೀಡಾಭಿಮಾನಿಗಳ ವತಿಯಿಂದ ಪಂಚಲಿಂಗೇಶ್ವರ ದೇವಾಲಯದಲ್ಲಿ ಸನ್ಮಾನಿಸಿ, ಗೌರವಿಸುವ ಮೂಲಕ ಶುಭ ಹಾರೈಯಿಸಲಾಯಿತು.

ಈ ಸಂದರ್ಭದಲ್ಲಿ ಬಿಂಕದಕಟ್ಟಿ ಗ್ರಾಂ.ಪಂ ಉಪಾಧ್ಯಕ್ಷೆ ದ್ಯಾಮವ್ವ ಹನಮಪ್ಪ ಆರಟ್ಟಿ, ರತ್ನಾ ಹೂಗಾರ, ವಿದ್ಯಾ ಅನವಾಲದ, ಲಕ್ಷೀ ಕುರ್ತಕೋಟಿ, ಭವ್ಯಾ ಹೂಗಾರ, ಸುವರ್ಣಾ ಕುರ್ತಕೋಟಿ, ಯಶವಂತಗೌಡ ಪಾಟೀಲ, ಕರಬಸಪ್ಪ ಕುರ್ತಕೋಟಿ, ವಿನಾಯಕಗೌಡ ಕರಿಗೌಡ್ರ, ಶ್ರೀಧರ ಹೂಗಾರ, ಮುದಕಪ್ಪ ಮಡಿವಾಳರ ಉಪಸ್ಥಿತರಿದ್ದರು. ಮುತ್ತಣ್ಣ ಹೂಗಾರ ಕಾರ್ಯಕ್ರಮ ನಿರೂಪಿಸಿದರೆ, ಶಿವಶಂಕರಪ್ಪ ಆರಟ್ಟಿ ವಂದಿಸಿದರು.

# ಕುಟುಂಬದ ಉನ್ನತಿಗೆ ಮಹಿಳೆಯರು ಕಾರಣ

■ವಿಜಯಸಾಕ್ಷಿ ಸುದ್ದಿ, ರೋಣ

ಕುಟುಂಬದ ಉನ್ನತಿಗೆ ಮಹಿಳೆಯರ ಕೊಡುಗೆ ದೊಡ್ಡದು ಎಂಬುದನ್ನು ಮುಚ್ಚಿಡಲಾಗದು ಎಂದು ಹೃದಯ ರೋಗ ತಜ್ಞೆ ಡಾ. ವಿಜಯಲಕ್ಷ್ಮೀ ಬಾಳಕುಂದರಿ ಹೇಳಿದರು.

ಅವರು ಮಂಗಳವಾರ ಮಾತೋಶ್ರೀ ಬಸಮ್ಮ ಸಂಗನಗೌಡ ಪಾಟೀಲರವರ 20ನೇ ಪುಣ್ಯಸ್ಮರಣೆ ನಿಮಿತ್ತ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಜರುಗಿದ ಮಹಿಳಾ ಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಿಳೆ ತನ್ನ ಕುಟುಂಬ ನಿರ್ವಹಣೆ ಜೊತೆಗೆ ಕುಟುಂಬಸ್ಥರ ಸುಂದರ ಬದುಕಿಗೆ ತನ್ನನ್ನು ತಾನು ಮುಡಿಪಾಗಿಡುತ್ತಾಳೆ. ಅಲ್ಲದೆ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ಕಲ್ಪಿಸುವ ಮಹಿಳೆ ಕುಟುಂಬದ ಮಹತ್ತರ ಜವಾಬ್ದಾರಿಯನ್ನು ನಿಭಾಯಿಸುತ್ತಾಳೆ. ಹೀಗಾಗಿ ಆಕೆ



ನಿಸ್ವಾರ್ಥ ಭಾವನೆ ಹೊಂದಿದವಳು ಎನ್ನುವುದರಲ್ಲಿ ಅನುಮಾನವಿಲ್ಲ ಎಂದರು.

ಮುಖ್ಯವಾಗಿ ಮಾತೋಶ್ರೀ ಬಸವ್ಮತಾಯಿಯವರು 20 ವರ್ಷಗಳ ಹಿಂದೆಯೇ ಮಹಿಳೆಯರ ಸ್ವಾವಲಂಬಿ ಬದು-ಕಿಗೆ ಉತ್ತೇಜನ ಕೊಟ್ಟಿರುವುದು ಮಹತ್ತರವಾದ ಮೈಲುಗಲ್ಲು. ಮಹಿಳಾ ಮಂಡಳ ಕಟ್ಟುವ ಮೂಲಕ ಬಡ ಮಹಿಳೆಯರ ಪಾಲಿಗೆ ಆಶಾಕಿರಣವಾದ ಮಾತೋಶ್ರೀ ಅವರು ಮಹಿಳೆಯರ ಸಮಾಜಮುಖಿ ಹಾಗೂ ಸುಂದರ ಬದುಕಿಗೆ ಸಹಾಯ ಹಸ್ತ ಚಾಚುತ್ತಿದ್ದರು ಎಂದರು.

ಸಾನ್ನಿಧ್ಯವನ್ನು ಗುರುಪಾದ ಶ್ರೀಗಳು, ಅಧ್ಯಕ್ಷತೆಯನ್ನು ಅನ್ನಪೂರ್ಣಮ್ಮ ಪಾಟೀಲ ವಹಿಸಿದ್ದರು. ಅನ್ನಪೂರ್ಣಮ್ಮ ನಾಡಗೌಡ, ಈರಮ್ಮ ಪಾಟೀಲ, ಗಿರಿಜಮ್ಮ ಪಾಟೀಲ, ಶಶಿಕಲಾ ಪಾಟೀಲ, ಶೋಭಾ ಮೇಟಿ, ರಂಗಮ್ಮ ಭಜಂತ್ರಿ, ವಿದ್ಯಾ ದೊಡ್ಡಮನಿ, ನೀಲಮ್ಮಾ ಬೋಳನವರ, ವನಜಾ ರೆಡ್ಡೆರ, ಗೀತಾ ಕೊಪ್ಪದ, ನೀಲಮ್ಮ ಪಾಟೀಲ, ದಾನೇಶ್ವರ ಭಜಂತ್ರಿ ಸೇರಿದಂತೆ ಅನೇಕ ಮಹಿಳಾ ಮುಖಂಡರು ಉಪಸ್ಥಿತರಿದ್ದರು.

# ಪ್ರಶಸ್ತಿಗಾಗಿ ಅರ್ಜಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ 2023-24ನೇ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರ ಮಟ್ಟದಲ್ಲಿ ವಿಶೇಷ ಸಾಧನೆಗೈದ 18 ವರ್ಷದ ಒಳಗಿನ ಮಕ್ಕಳಿಂದ "ಬಾಲಗೌರವ ಪ್ರಶಸ್ತಿ"ಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಮಕ್ಕಳು ಕ್ರೀಡೆ, ಸಂಗೀತ, ನೃತ್ಯ, ಬಹುಮುಖ ಪ್ರತಿಭೆ, ನಟನೆ, ಚಿತ್ರಕಲೆ ಹಾಗೂ ವಿಜ್ಞಾನ ಮತ್ತುಸಂಶೋಧನೆಯಲ್ಲಿ ಹೀಗೆ 07 ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆಯನ್ನು ಮಾಡಿ ಪ್ರಶಸ್ತಿ ಪಡೆದ ಪುರಸ್ಕೃತ ಮಗುವಾಗಿರಬೇಕು.

ಇಂತಹ ಮಕ್ಕಳು ಅಕಾಡೆಮಿ ಬಾಲಗೌರವ ಪ್ರಶಸ್ತಿಗಾಗಿ ತಮ್ಮ ಸ್ವಯಂ ದೃಢೀಕೃತ ನಕಲು ದಾಖಲೆಗಳೊಂದಿಗೆ ಹಾಗೂ ಸ್ವ-ವಿವರಗಳನ್ನೊಳಗೊಂಡ ಮನವಿಯೊಂದಿಗೆ ಅರ್ಜಿಯನ್ನು ಆಗಸ್ಟ್ 26 ರೊಳಗೆ ಆಕಾಡೆಮಿಯ ಕೇಂದ್ರ ಕಚೇರಿ ವಿಳಾಸಕ್ಕೆ ಪೋಸ್ಟ್ ಮುಖಾಂತರ ತಲುಪುವಂತೆ ಕಳುಹಿಸಬೇಕು.

ನಂತರ ಬಂದ ಅರ್ಜಿಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ. ಹಾಗೆಯೇ ಈಗಾಗಲೇ ಬಾಲಗೌರವ ಪ್ರಶಸ್ತಿ ಪಡೆದವರ ಅರ್ಜಿಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ.

ಸದರಿ ಪ್ರಶಸ್ತಿಯ ಅರ್ಜಿ ನಮೂನೆ / ಮಾನದಂಡಗಳನ್ನು ಕಚೇರಿಯ ವೆಬಸೈಟ್ ಲಿಂಕ್ https://balavikasaacademy.karnataka.gov.in ನಲ್ಲಿ ವೀಕ್ಷಿಸಬಹುದಾಗಿದೆ.

ಕೇಂದ್ರ ಕಚೇರಿ ವಿಳಾಸ: ಮಾನ್ಯ ಯೋಜನಾಧಿಕಾರಿಗಳು, ಚಂದ್ರಿಕಾ ಲೇ ಔಟ್ ಹಿಂಭಾಗ ಕೆ.ಎಚ್.ಬಿ ಕಾಲೋನಿ, ಲಕಮನಹಳ್ಳಿ ಧಾರವಾಡ-580004 ದೂರವಾಣಿ ಸಂ: 0836-2465490

# ಪ್ರಶಸ್ತಿಗಾಗಿ ಪುಸ್ತಕಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬಾಲವಿಕಾಸ ಅಕಾಡೆಮಿಯು 2023ನೇ ಸಾಲಿನಲ್ಲಿ ಮಕ್ಕಳ ಕ್ಷೇತ್ರದಲ್ಲಿ ರಚಿಸಲ್ಪಟ್ಟ ಆಯ್ಕೆ ಉತ್ತಮ ಪುಸ್ತಕಗಳಿಗೆ "ಮಕ್ಕಳ ಪುಸ್ತಕ ಚಂದಿರ ಪ್ರಶಸ್ತಿ"ಯನ್ನು ಪ್ರಧಾನ ಮಾಡಲು ಉದ್ದೇಶಿಸಲಾಗಿದೆ. ಆದ್ದರಿಂದ ಆಯಾ ಸಾಲಿನ ಅವಧಿಯಲ್ಲಿ ಅಂದರೆ ಜನವರಿ-2022ರಿಂದ ಡಿಸೆಂಬರ್-2023ರ ತಿಂಗಳ ಅಂತ್ಯದ ಅವಧಿಯಲ್ಲಿ ಪ್ರಕಟಗೊಂಡ ಸ್ವರಚಿತ ಕವನ ಸಂಕಲನ, ಕಥಾ ಸಂಕಲನ, ನಾಟಕ, ಮಕ್ಕಳ ಕಾದಂಬರಿ, ವೈಜ್ಞಾನಿಕ ಲೇಖನಗಳ ಸಂಕಲನ, ಅನುವಾದಿತ ಕೃತಿ (ಯಾವುದೇ ಪ್ರಕಾರದ ಮಕ್ಕಳ ಸಾಹಿತ್ಯ) ಮಕ್ಕಳ ಸಾಹಿತ್ಯ ವಿಮರ್ಶಾ ಕೃತಿ ಹೀಗೆ ಏಳು ಪ್ರಕಾರದ ಮಕ್ಕಳ ಸಾಹಿತ್ಯದ ಕೃತಿಗಳನ್ನು ಪ್ರಶಸ್ತಿಗಾಗಿ ಆಹ್ವಾನಿಸಲಾಗಿದೆ.

ಮೇಲ್ಕಾಣಿಸಿದ ಕ್ಷೇತ್ರಗಳಲ್ಲಿ ಪ್ರಕಟಗೊಂಡ ಪುಸ್ತಕಗಳನ್ನು ಪ್ರಶಸ್ತಿಗಾಗಿ ಪರಿಗಣಿಸಲು / ಮೌಲ್ಯಮಾಪನಗೊಳಿಸಲು ಪ್ರತಿಯೊಂದು ಕೃತಿಯ 4 ಪ್ರತಿಗಳನ್ನು ಹಾಗೂ ಸ್ವ-ವಿವರಗಳನ್ನೊಳಗೊಂಡ ಮನವಿಯೊಂದಿಗೆ ದಿ:26.08.2024 ತಾರೀಖಿನೊಳಗಾಗಿ ಅಕಾಡೆಮಿಯ ಕೇಂದ್ರ ಕಚೇರಿ ವಿಳಾಸಕ್ಕೆ ಪೋಸ್ಟ್ ಮುಖಾಂತರ ತಲುಪುವಂತೆ ಕಳುಹಿಸುವುದು. ನಂತರ ಬಂದ ಅರ್ಜಿಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ. ಸದರಿ ಪ್ರಶಸ್ತಿಯ ಮಾನದಂಡಗಳನ್ನು ಕಚೇರಿಯ https://balavikasaa-cademy.karnataka.gov.in ನಲ್ಲಿ ವೀಕ್ಷಿಸಬಹುದಾಗಿದೆ.

ಕೇಂದ್ರ ಕಚೇರಿ ವಿಳಾಸ ಮಾನ್ಯ ಯೋಜನಾಧಿಕಾರಿಗಳು, ಚಂದ್ರಿಕಾ ಲೇ ಔಟ್ ಹಿಂಭಾಗ ಕೆ.ಎಚ್.ಬಿ ಕಾಲೋನಿ , ಲಕಮನಹಳ್ಳಿ ಧಾರವಾಡ-580004 ದೂರವಾಣಿ ಸಂ: 0836-2465490

### ಲಿಂ.ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಪಟ್ಟಾಧಿಕಾರ ಸುವರ್ಣ ಮಹೋತ್ಸವ, ಪುರಸ್ಕಾರ ಪ್ರದಾನ ಸಮಾರಂಭ

# ಶ್ರೀಗಳನ್ನು ನೆನೆಯುವುದೇ ನಮ್ಮೆಲ್ಲರ ಸೌಭಾಗ್ಯ

■ವಿಜಯಸಾಕ್ಷಿ ಸುದ್ದಿ, ಗದಗ

70ರ ದಶಕದಲ್ಲಿ ನಾನು ಗದುಗಿನಲ್ಲಿ 6 ವರ್ಷ ಅಧ್ಯಯನ ಮಾಡುವಾಗ ಇಲ್ಲಿ ತೋಂಟದಾರ್ಯ ಮಠ ಇದೆ ಎಂಬ ಸಂಗತಿಯೇ ಅನೇಕರಿಗೆ ಗೊತ್ತಿರಲಿಲ್ಲ. ಆದರೆ, ಲಿಂ.ಸಿದ್ಧಲಿಂಗ ಶ್ರೀಗಳ ಪಾದಾರ್ಪಣೆ ನಂತರ ಈ ಮಠದ ಕೀರ್ತಿ ದೇಶದ ಉದ್ದಗಲಕ್ಕೂ ಹರಡಿತು. ಕೇವಲ ಧಾರ್ಮಿಕತೆಗೆ ಸೀಮಿತವಾಗಿದ್ದ ಈ ಮಠವನ್ನು ಲಿಂಗೈಕ್ಯ ಗುರುಗಳು ಸರ್ವ ಜನಾಂಗದ ಶಾಂತಿಯ ತೋಟವನ್ನಾಗಿಸಿದರು ಎಂದು ಸಾಹಿತಿ, ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಡಾ.ವೀರಣ್ಣ ರಾಜೂರ ನುಡಿದರು.

ಅವರು ಇಲ್ಲಿನ ಜಗದ್ಗುರು ತೋಂಟದಾರ್ಯ ಮಠದಲ್ಲಿ ಲಿಂ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಪೀಠಾರೋಹಣದ ರಜತಮಹೋತ್ಸವದ ಅಂಗವಾಗಿ ಏರ್ಪಡಿಸಿದ್ದ 2704ನೇ ಶಿವಾನುಭವ ಹಾಗೂ ಡಾ.ತೋಂಟದ ಸಿದ್ಧಲಿಂಗಶ್ರೀ ಪುರಸ್ಕಾರ ಪ್ರದಾನ ಸಮಾರಂಭದಲ್ಲಿ ಲಿಂಗೈಕ್ಯ ಗುರುಗಳಿಗೆ ನುಡಿನಮನ ಸಲ್ಲಿಸಿ ಮಾತನಾಡಿದರು.

ಪೂಜ್ಯರು ಶ್ರೀಮಠದ ಪೀಠಾಧಿಪತಿಯಾಗಿದ್ದ 44 ವರ್ಷಗಳಲ್ಲಿ ನೂರು ವರ್ಷಗಳಿಗಾಗುವಷ್ಟು ಸಾಧನೆಯನ್ನು ಮಾಡಿ ತೋರಿಸಿದ್ದು, ಸಮಾಜಸೇವೆ, ಸಾಹಿತ್ಯ, ಸಂಸ್ಕೃತಿ, ಶಿಕ್ಷಣ ಹೀಗೆ ಅನೇಕ ಕ್ಷೇತ್ರಗಳಲ್ಲಿ ಮಹತ್ವದ ಬದಲಾವಣೆ ತಂದಿದ್ದಾರೆ. ಅವರು ಆರಂಭಿಸಿದ ಶಿವಾನುಭವ ಕಾರ್ಯಕ್ರಮಗಳು ಅಪೂರ್ವ ದಾಖಲೆಯಾಗಿದ್ದು, ಎಲ್ಲ ಜಾತಿ-ಜನಾಂಗಗಳ ಮಾನವೀಯ ಮೌಲ್ಯಗಳ ಕುರಿತು ಈ ವೇದಿಕೆಯಲ್ಲಿ ಚರ್ಚೆಗಳು ನಡೆದಿವೆ. ಶ್ರೀಗಳ ಪುಸ್ತಕಪ್ರೇಮ ನಮಗೆಲ್ಲ ಮಾದರಿಯಾಗಿದ್ದು, ಅವರನ್ನು ನೆನೆಯುವುದೇ ನಮ್ಮೆಲ್ಲರ ಸೌಭಾಗ್ಯವಾಗಿದೆ ಎಂದರು.

ಖ್ಯಾತ ಪತ್ರಕರ್ತರಾದ ಡಾ.ವಿಲಾಸ ನಾಂದೋಡ್ಕರ ಹಾಗೂ ರಘುನಾಥ ಚ.ಹ ಅವರಿಗೆ 'ಡಾ.ತೋಂಟದ ಸಿದ್ಧಲಿಂಗಶ್ರೀ' ಪುರಸ್ಕಾರ ಪ್ರದಾನ ಮಾಡಲಾಯಿತು. ಡಾ.ವಿಲಾಸ ನಾಂದೋಡ್ಕರ ಮಾತನಾಡಿ,



ಮಠಗಳು ಎಂದ ತಕ್ಷಣ ನಮಗೆ ಮೊದಲು ನೆನಪಾಗುವುದೇ ತೋಂಟದಾರ್ಯ ಮಠ. ಲಿಂಗೈಕ್ಯ ಗುರುಗಳು ಈ ಮಠವನ್ನು ಮಾದರಿಯಾಗುವಂತೆ ಬೆಳೆಸಿದ್ದಾರೆ. ಕಪ್ಪತಗುಡ್ಡವನ್ನು ಭೂದಾಹಿಗಳು ಕಬಳಿಸಲು ಯತ್ನಿಸಿದಾಗ ಅದರ ರಕ್ಷಣೆ ಬಯಸಿದ್ದ ನಮಗೆಲ್ಲ ಪ್ರೇರಕಶಕ್ತಿಯಾಗಿದ್ದವರೇ ತೋಂಟದ ಸಿದ್ಧಲಿಂಗ ಶ್ರೀಗಳು. ಅವರ 50ನೇ ವರ್ಷದ ಪಟ್ಟಾಧಿಕಾರ ಸಂದರ್ಭದಲ್ಲಿ ಅವರ ಹೆಸರಿನ ಪುರಸ್ಕಾರ ದೊರೆತಿರುವುದು ನನ್ನ ಪುಣ್ಯ ಎಂದರು.

ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿದರು. ರುದ್ನೂರಿನ ತೋಂಟದಾರ್ಯ ಶಾಖಾಮಠಕ್ಕೆ ಉತ್ತರಾಧಿಕಾರಿಗಳಾಗಿ ಆಯ್ಕೆಯಾಗಿರುವ ಪೂಜ್ಯ ಚೆನ್ನಮಲ್ಲಿಕಾರ್ಜುನ ದೇವರನ್ನು ಸನ್ಮಾನಿಸಲಾಯಿತು.

ಡಾ.ತೋಂಟದ ಸಿದ್ಧಲಿಂಗಶ್ರೀ ಪುರಸ್ಕಾರ ಸಮಿತಿಯ ಸಿದ್ದು ಸತ್ಯಣ್ಣವರ ಹಾಗೂ ಪದಾಧಿಕಾರಿಗಳು, ರಾಜೇಶ ಹಾಗೂ ಗಿರೀಶ ಈಶ್ವರಪ್ಪ ಮಾನ್ವಿ ದಾಸೋಹ ಸೇವೆ ವಹಿಸಿದ್ದರು. ಶಶಿಕುಮಾರ ಬಂಡಿ ಧರ್ಮಗ್ರಂಥ

ಪ್ರಶಸ್ತಿ ಪುರಸ್ಕೃತ ಖ್ಯಾತ ಪತ್ರಕರ್ತ ರಘುನಾಥ ಚ.ಹ ಮಾತನಾಡಿ, ಮಾಧ್ಯಮಗಳನ್ನು ಹಾಗೂ ಧಾರ್ಮಿಕ ಸಂಸ್ಥೆಗಳನ್ನು ಜನರು ಅನುಮಾನದಿಂದ ನೋಡುತ್ತಿರುವ ವಿಷಮ ಪರಿಸ್ಥಿತಿ ಇದು. ಇಂಥ ಸಂಕೀರ್ಣ ಸಮಯದಲ್ಲಿ ಮಠಗಳು ಹಾಗೂ ಮಾಧ್ಯಮಗಳು ಸಮಾಜದ ಆರೋಗ್ಯವನ್ನು ಕಾಪಾಡಲು ಪ್ರಜ್ಞಾಪೂರ್ವಕವಾಗಿ ಕಾರ್ಯನಿರ್ವಹಿಸಬೇಕಿದೆ. ಕಪ್ಪತಗುಡ್ಡದ ಪರಿಸರದಲ್ಲಿ ಲಿಂಗೈಕ್ಯ ಪೂಜ್ಯರ ಜೀವಂತಿಕೆ ಇದೆ. ಅವರ ಆಶಯಗಳನ್ನು ಅರ್ಥಪೂರ್ಣವಾಗಿ ಮುಂದಿನ ತಲೆಮಾರಿಗೆ ದಾಟಿಸಬೇಕಿದ್ದು, ಈ ಪ್ರಶಸ್ತಿ ನನಗೆ ಸಂದ ಗೌರವವಲ್ಲ, ಬದಲಿಗೆ ನಾನು ಕೆಲಸ ನಿರ್ವಹಿಸುವ ಸಂಸ್ಥೆಗೆ ಸಂದ ಗೌರವ ಎಂದರು.

ಪಠಿಸಿದರೆ, ರೋಹಿತ ತೊಂಡಿಹಾಳ ವಚನ ಚಿಂತನಗೈದರು.

ಗುರುಮಠಕಲ್‌ನ ಶಾಂತವೀರ ಮುರುಘರಾಜೇಂದ್ರ ಶ್ರೀಗಳು, ನೇರಡಗಂಬಾ ಸಿದ್ಧಲಿಂಗೇಶ್ವರ ಮಠದ ಪಂಚಮ ಸಿದ್ಧಲಿಂಗೇಶ್ವರ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು. ವೇದಿಕೆ ಮೇಲೆ ರುದ್ನೂರು ತೋಂಟದ ಸಿದ್ಧೇಶ್ವರ ಸಮಿತಿಯ ಅಧ್ಯಕ್ಷ ಶಿವರಾಜ ಪಾಟೀಲ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಸಿ.ಇ.ಓ ಮಲ್ಲಿಕಾರ್ಜುನ ಶೆಲ್ಲಿಕೇರಿ, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ ಇದ್ದರು.

## ಸಂವಿಧಾನ ಈ ನೆಲದ ಪವಿತ್ರ ಗ್ರಂಥ



■ ವಿಜಯಸಾಕ್ಷಿ ಸುದ್ದಿ, ನರೇಗಲ್

ಭಾರತದ ಸಂವಿಧಾನ ಒಂದು ಪವಿತ್ರ ಗ್ರಂಥವಾಗಿದೆ. ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ಭಾರತದ ಸಂವಿಧಾನ ಎಲ್ಲರ ಒಳಿತು ಬಯಸುವ ಸರ್ವಶ್ರೇಷ್ಠ ಕೃತಿಯಾಗಿದೆ. ಎಲ್ಲರೂ ಸಂವಿಧಾನವನ್ನು ಓದಿ ಮನದಟ್ಟು ಮಾಡಿಕೊಳ್ಳಬೇಕು ಎಂದು ಉಪನ್ಯಾಸಕ ಶಿವಾನಂದ ಗೋಗೇರಿ ಹೇಳಿದರು.ಸ್ಥಳೀಯ ಕೆಎಸ್‌ಎಸ್ ಪಿಯುಸಿ ಕಾಲೇಜಿನಲ್ಲಿ ಗೃಹರಕ್ಷಕ ದಳದ ಆಶ್ರಯದಲ್ಲಿ ನಡೆದ ಸಂವಿಧಾನ ಓದು ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂವಿಧಾನವು ಯಾವುದೇ ಜಾತಿ, ಮತ, ಧರ್ಮ ಬೇಧವಿಲ್ಲದೆ ಎಲ್ಲ ನಾಗರಿಕರಿಗೆ ಅನ್ವಯವಾಗುವ ಪವಿತ್ರ ಗ್ರಂಥವಾಗಿದ್ದು, ಸಮಾಜದ ಪ್ರತಿಯೊಬ್ಬ ನಾಗರಿಕರಿಗೆ ಅನ್ವಯವಾಗುವ ಹಕ್ಕು ಮತ್ತು ಕರ್ತವ್ಯಗಳನ್ನು ಒಳಗೊಂಡಿದೆ. ಸಂವಿಧಾನವು ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗ ಎಂಬ ಮೂರು ಅಂಗಗಳಿಂದ ಕೂಡಿದ್ದು, ಪ್ರಜೆಗಳಿಗೆ ಸೂಕ್ತ ಹಕ್ಕು, ಕರ್ತವ್ಯ ಮತ್ತು ನ್ಯಾಯವನ್ನು ಸಂವಿಧಾನ ಒದಗಿಸಲಿದೆ. ಸಂವಿಧಾನ ಕಾದಂಬರಿ, ಕವಿತೆಯಲ್ಲ ಒಂದು ಪವಿತ್ರ ಗ್ರಂಥವಾಗಿದ್ದು, ದೇಶದ ಹಲವು ಸಮಸ್ಯೆಗಳಿಗೆ ಪರಿಹಾರ ನೀಡಲಿದೆ. ಅಂತಹ ಮಹಾನ್ ಗ್ರಂಥವನ್ನು ಎಲ್ಲರೂ ಓದಿ ತಿಳಿದುಕೊಳ್ಳಬೇಕು ಎಂದರು.

ಘಟಕಾಧಿಕಾರಿ ಸುರೇಶ ಹಳ್ಳಿಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗೃಹರಕ್ಷಕರಾದ ಪಿ.ಎಸ್. ಸಾಬಳೆ, ಪಿ.ಕೆ. ಹಡಪದ, ಶರಣಪ್ಪ ಬೇಲೇರಿ, ವಿರೂಪಾಕ್ಷಪ್ಪ ಇಟಗಿ, ನಾಗಪ್ಪ ತಳವಾರ, ಶಿವಪ್ಪ ಮುಶಿಗೇರಿ, ಕೆಂಚಪ್ಪ ಹಾಳಕೇರಿ, ಮಂಜುನಾಥ ಕಡೆತೋಟದ, ಅರುಣ ಕುರುಡಗಿ ಸೇರಿದಂತೆ ಗೃಹ ರಕ್ಷಕ ಸಿಬ್ಬಂದಿಗಳು ಇದ್ದರು.

**ವಲಯ ಮಟ್ಟದ ಕ್ರೀಡಾಕೂಟದಲ್ಲಿ ಶಿವಲೀಲಾ ಬಂಡಿಹಾಳ ಅಭಿಮತ**

## ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದು ಅವಶ್ಯ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿ ವಿದ್ಯಾರ್ಥಿಯ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ಕ್ರೀಡೆಗಳಲ್ಲಿ ಭಾಗವಹಿಸುವುದು ಬಹಳ ಅವಶ್ಯಕ ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಲೀಲಾ ದೇವಪ್ಪ ಬಂಡಿಹಾಳ ಹೇಳಿದರು.

ಡಂಬಳ ಗ್ರಾಮದ ಡಿಪಿಇಪಿ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ನಡೆದ ವಲಯ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ಎಸ್‌ಡಿಎಮ್‌ಸಿ ಅಧ್ಯಕ್ಷ ಗೌಸಿದ್ಧಪ್ಪ ಹಾದಿಮನಿ ಮಾತನಾಡಿ, ಮಕ್ಕಳ ಆಸಕ್ತಿ ಗುರುತಿಸಿ ಪಾಲಕರು, ಕ್ರೀಡಾ ಶಿಕ್ಷಕರು ಅವರಿಗೆ ಪ್ರೋತ್ಸಾಹ ನೀಡುವುದರ ಮೂಲಕ ಗ್ರಾಮೀಣ ಕ್ರೀಡೆಗಳಿಗೆ ಆದ್ಯತೆ ನೀಡಬೇಕು. ಗ್ರಾಮೀಣ ಮಟ್ಟದಲ್ಲಿ ಕ್ರೀಡೆಯಲ್ಲಿ ಸಾಧನೆ ಮಾಡುವ ಮಕ್ಕಳು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡುವಂತಾಗಲಿ ಎಂದು ಹಾರೈಸಿದರು.

ಬಾಲಕರ ಗುಂಪು ಆಟಗಳಾದ ಖೋ ಖೋ, ಥ್ರೋ ಬಾಲ್, ವಾಲಿಬಾಲ್, ಕಬಡ್ಡಿಯಲ್ಲಿ ಎಮ್‌ಸಿಎಸ್ ಶಾಲೆಯ ವಿದ್ಯಾರ್ಥಿಗಳು ಪ್ರಥಮ, ಬಾಲಕಿಯರ ಗುಂಪು ಆಟದಲ್ಲಿ ಥ್ರೋಬಾಲ್, ಕಬಡ್ಡಿಯಲ್ಲಿ ಕೆ.ಜಿ.ಎಸ್ ಶಾಲೆ, ಖೋ ಖೋ ಕೆ.ಜಿ.ಬಿ.ವಿ ಶಾಲೆಯ ವಿದ್ಯಾರ್ಥಿನಿಯರು ಪ್ರಥಮ ಸ್ಥಾನ ಪಡೆದರು.100ಮೀ ಓಟ ಮಂಜುನಾಥ ಬೆನಾಳ ಪ್ರಥಮ, ಸೂರಜ ಲಮಾಣಿ ದ್ವಿತೀಯ, 200ಮೀ ಓಟ ಅನಿಲ ರಾಜೂರ ಪ್ರಥಮ, ಪಾಂಡುರಂಗ ಆದಮ್ಮನವರ ದ್ವಿತೀಯ, 400ಮೀ ಯಲ್ಲಪ್ಪ ಕದಡಿ ಪ್ರಥಮ, ಅಭಿಷೇಕ ಬಂಡಿ ದ್ವಿತೀಯ, 80 ಮೀ ಅಡೆತಡೆ ಓಟ ಸೂರಜ ಲಮಾಣಿ ಪ್ರಥಮ, ಯಲ್ಲಪ್ಪ ಕದಡಿ ದ್ವಿತೀಯ, 600ಮೀ ಹನುಮಂತ ಶಿರುಂದ ಪ್ರಥಮ, ಶಿವಾನಂದ ಹಾದಿಮನಿ ದ್ವಿತೀಯ, 400ಮೀ ರಿಲೆ ದೇವರಾಜ ದಾಸರು ಸಂಗಡಿಗರು, ಬಾಲಕಿಯರ ವೈಯಕ್ತಿಕ ಕ್ರೀಡಾ ಕೂಟದಲ್ಲಿ 100ಮೀ ನೇತ್ರಾ ಒಂಟೆಲಭೋವಿ ಪ್ರಥಮ, ಅರ್ಪಿತಾ ಲಮಾಣಿ ದ್ವಿತೀಯ, 200ಮೀ ನೇತ್ರಾ ಒಂಟೆಲಭೋವಿ ಪ್ರಥಮ, ಭಾಗ್ಯ ಬೂದಿಹಾಳ ದ್ವಿತೀಯ, 400 ಮೀ ಚೈತ್ರಾ ಕೂಲಿ ಪ್ರಥಮ, ಪ್ರೀತಿ ಪೂಜಾರ ದ್ವಿತೀಯ, 600ಮೀ ಚಂದ್ರಿಕಾ ತಳವಾರ ಪ್ರಥಮ, ಅಕ್ಷತಾ ಜಕ್ಕಲಿ, 80ಮೀ ಅಡತಡೆ ನೇತ್ರಾ ಒಂಟೆಲಭೋವಿ ಪ್ರಥಮ, ಅರ್ಪಿತಾ ಲಮಾಣಿ ದ್ವಿತೀಯ, 400ಮೀ ರಿಲೆ ನೇತ್ರಾ ಒಂಟೆಲಭೋವಿ ಸಂಗಡಿಗರು ಸ್ಥಾನ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ತಾಲೂಕಾ ದೈಹಿಕ ಶಿಕ್ಷಣಾಧಿಕಾರಿ ಬಸವಣ್ಣೆಪ್ಪ, ಗ್ರಾ.ಪಂ ಉಪಾಧ್ಯಕ್ಷೆ ಲಕ್ಷ್ಮವ್ವ ಕಾಶಭೋವಿ, ಕುಮಾರ ಮಾನೆ, ಬಸಮ್ಮ ಹಾದಿಮನಿ, ಜಿ.ವಿ. ಹಿರೇಮಠ, ನಟರಾಜ ಬಳ್ಳಾರಿ, ಕೆ.ಎಮ್. ಗೊರವರ, ಮಂಜುನಾಥ ಸಂಜೆನ್ನವರ, ರಂಗಪ್ಪ ಜೋಂಡಿ, ಮರಿತೆಮಪ್ಪ ಆದಮ್ಮನವರ, ಸಿಆರ್‌ಪಿ ಮೃಂತುಜ್ಯಯ ಪೂಜಾರ, ಡಿಪಿಇಪಿ ಮುಖ್ಯೋಪಾಧ್ಯಾಯೆ ಎಸ್.ಜಿ. ಪಾಟೀಲ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ವಾಸಪ್ಪ ಕಾಶಭೋವಿ, ಕಾಶಿಮಲಿ ಬೆನಕೊಪ್ಪ, ಕೃಷ್ಣಪ್ಪ ಪೂಜಾರ, ಸುಶೀಲಾ ಚಲವಾದಿ, ಮಾಜಿ ಸೈನಿಕರು, ಶಾಲಾ ಗುರುವೃಂದ, ದೈಹಿಕ ಶಿಕ್ಷಕರು, ಕ್ರೀಡಾ ಅಭಿಮಾನಿಗಳು ಪಾಲಕರು, ವಿದ್ಯಾರ್ಥಿಗಳು ಇದ್ದರು.

## ಕಟ್ಟಡ ಮಾಲೀಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರ ವಸತಿ ನಿಲಯಗಳಿಗೆ ತಲಾ 150 ವಿದ್ಯಾರ್ಥಿಗಳಿಗೆ ಬೇಕಾಗುವ 2 ವಸತಿ ನಿಲಯಗಳಿಗೆ 2 ಬಾಡಿಗೆ ಕಟ್ಟಡಗಳು ಅವಶ್ಯವಿದೆ. 150 ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಇರುವ ಪ್ರತ್ಯೇಕ ಕೊಠಡಿಗಳನ್ನು, ಶೌಚಾಲಯ, ಸ್ನಾನಗೃಹ ವಿಶಾಲವಾದ ಅಡುಗೆ ಮನೆ, ವಿದ್ಯುತ್ ಸೌಲಭ್ಯ, ಬೋರವೆಲ್ ಹೊಂದಿರುವ ಸುಸಜ್ಜಿತ 2 ವಸತಿ ನಿಲಯಗಳಿಗೆ 2 ಬಾಡಿಗೆ ಕಟ್ಟಡಗಳು ಅವಶ್ಯವಿದೆ. ಕಟ್ಟಡವನ್ನು ಬಾಡಿಗೆ ರೂಪದಲ್ಲಿ ಕೊಡಲು ಬಯಸುವ ಕಟ್ಟಡ ಮಾಲೀಕರು ತಕ್ಷಣ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ. ಆಫೀಸ್ ಎದುರಿಗೆ ಹೊಸ ಬಸ್ ನಿಲ್ದಾಣ ಹಿಂದುಗಡೆ ಗದಗ ಇವರನ್ನು ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ.

**ಶಾಲಾ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕೃತಿ ಕಲಿಸಿ

■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಶಿಕ್ಷಣದಿಂದ ಮನುಷ್ಯನ ಬುದ್ಧಿ ಶಕ್ತಿ ಬೆಳೆಯುತ್ತದೆ. ಧರ್ಮದಿಂದ ಭಾವನೆಗಳು ಬೆಳೆಯುತ್ತವೆ. ಬದುಕಿ ಬಾಳುವ ಮನುಷ್ಯನಿಗೆ ಇವೆರಡರ ಅವಶ್ಯಕತೆಯಿದೆ. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕೃತಿ ಕಲಿಸುವ ಶಾಲೆಗಳು ಹೆಚ್ಚೆಚ್ಚು ಬೆಳೆದು ಬರಲೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಗೋಣಿವಾಡ ಪರಿಸರದಲ್ಲಿರುವ ಶ್ರೀ ಸೋಮೇಶ್ವರ ವಸತಿಯುತ ವಿದ್ಯಾಲಯದ ಮತ್ತೊಂದು ಭವ್ಯ ಶಾಲಾ ಕಟ್ಟಡ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಶಿಕ್ಷಣದಿಂದ ದೇಶದ ಪ್ರಗತಿ ಮತ್ತು ಅಭ್ಯುದಯವಿದೆ. ಶಿಕ್ಷಣದಿಂದ ಯಾರೂ ವಂಚಿತರಾಗಬಾರದು. ನಗರ ಪ್ರದೇಶದಲ್ಲಿ ಉತ್ತಮವಾದ ಶಾಲೆಗಳಿರುವುದು ಸಹಜ. ಆದರೆ



ಗ್ರಾಮೀಣ ಭಾಗದಲ್ಲಿ ಭಾರತೀಯ ಸಂಸ್ಕೃತಿಯ ಜೊತೆಗೆ ಆಧುನಿಕ ಶಿಕ್ಷಣ ಕೊಡುವ ಶಾಲೆಗಳು ಕಡಿಮೆ ಇವೆ. ಇಂದಿನ ಮಕ್ಕಳೇ ಮುಂದಿನ ನಾಯಕರು. ಮಕ್ಕಳಿಗಾಗಿ ಆಸ್ತಿ ಮಾಡದೇ ಅವರಿಗೆ ಉತ್ತಮ ಶಿಕ್ಷಣ ಕೊಡುವುದರ ಮೂಲಕ ಅವರನ್ನೇ ಆಸ್ತಿಯನ್ನಾಗಿ ಮಾಡಬೇಕಾಗಿದೆ. ಶಿಕ್ಷಣದ ಜೊತೆಗೆ ಸಂಸ್ಕಾರ ಸಂಸ್ಕೃತಿ ಕಲಿಸುವ ಜ್ಞಾನ ದೇಗುಲಗಳು ಎಲ್ಲೆಡೆ ಬೆಳೆದು ಬರಲೆಂದು ಆಶಿಸಿದ ಜಗದ್ಗುರುಗಳು, ಸಂಸ್ಥೆಯ ಕಾರ್ಯದರ್ಶಿ ಕೆ.ಎಂ. ಸುರೇಶ ಅವರು ಗ್ರಾಮೀಣ ಮಕ್ಕಳ ಬಾಳಿಗೆ ಉತ್ತಮ ಶಿಕ್ಷಣ ಕೊಡುವ ಸಂಕಲ್ಪ ತೊಟ್ಟು ಕಾರ್ಯ ಮಾಡುತ್ತಿದ್ದಾರೆ. ಕೇವಲ ಒಂದು ವರ್ಷದಲ್ಲಿ 5 ಅಂತಸ್ತಿನ ಭವ್ಯ ಕಟ್ಟಡ ನಿರ್ಮಾಣಗೊಂಡು ಇಂದು ಉದ್ಘಾಟನೆಯಾಗುತ್ತಿರುವುದು ತಮಗೆ ಸಂತೋಷ ತಂದಿದೆ ಎಂದರು.

ಸಂಸ್ಥೆಯ ಕಾರ್ಯದರ್ಶಿ ಕೆ.ಎಂ. ಸುರೇಶ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಸಂಸ್ಥೆಯ ಅಭಿವೃದ್ಧಿಯ ಬಗೆಗೆ ಮಾತನಾಡಿದರು. ಮಾಜಿ ಸಚಿವ ಎಸ್.ಎ. ರವೀಂದ್ರನಾಥ ಹಾಗೂ ಮಾಜಿ ವಿಧಾನ ಪರಿಷತ್ ಸಚೇತಕ ಡಾ. ಎ.ಎಚ್. ಶಿವಯೋಗಿಸ್ವಾಮಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು.

ಶಾಲಾ ಕಟ್ಟಡವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆಯೊಂದಿಗೆ ಉದ್ಘಾಟಿಸಿದರು. ಸಮಾರಂಭದ ನಂತರ ಪ್ರಸಾದ ವಿನಿಯೋಗ ಜರುಗಿತು.

## ಹೆಸರು ಖರೀದಿ ಕೇಂದ್ರ ಪ್ರಾರಂಭಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಲ್ಲಿ ಈಗಾಗಲೇ ಹೆಸರು ಬೆಳೆಯ ಕಟಾವು ಆರಂಭಗೊಂಡಿದ್ದು, ರೈತರ ಅನುಕೂಲತೆಯ ದೃಷ್ಟಿಯಿಂದ ಶೀಘ್ರವೇ ಹೆಸರು ಖರೀದಿ ಕೇಂದ್ರವನ್ನು ಪ್ರಾರಂಭಿಸಬೇಕು ಎಂದು ಆಗ್ರಹಿಸಿ ಪಟ್ಟಣದ ರೈತರು ಮಂಗಳವಾರ ತಹಸೀಲ್ದಾರ್ ನಾಗರಾಜ ಕೆ ಅವರಿಗೆ ಮನವಿ ಸಲ್ಲಿಸಿದರು.

ರೈತ ಮುಖಂಡ ಅರ್ಜುನ ಕೊಪ್ಪಳ ಮಾತನಾಡಿ, ಸರಕಾರ ಈಗಾಗಲೇ ಬೆಂಬಲ ಬೆಲೆಯನ್ನು ಘೋಷಣೆ ಮಾಡಿದ್ದು ಒಳ್ಳೆಯ ಬೆಳವಣಿಗೆಯಾದರೂ ಹೆಸರು ಬೆಳೆ ಖರೀದಿ ಕೇಂದ್ರವನ್ನು ಆರಂಭಿಸಿದಾಗ ಮಾತ್ರ ರೈತರಿಗೆ



ಲಾಭ ಸಿಗಲಿದೆ. ಇಲ್ಲದಿದ್ದರೆ ರೈತರು ತಮ್ಮ ಹಣದ ಅಡಚಣೆಗಾಗಿ ಬೇರೆ ಕಡೆಗಳಲ್ಲಿ ಮಾರಾಟ ಮಾಡುತ್ತಾರೆ. ಆದ್ದರಿಂದ ಅಧಿಕಾರಿಗಳು ಶೀಘ್ರವೇ ಪಟ್ಟಣದಲ್ಲಿ ಖರೀದಿ ಕೇಂದ್ರವನ್ನು ತೆರೆಯಬೇಕು ಎಂದು ಆಗ್ರಹಿಸಿದರು.

ರೋಣ ಹೋಬಳಿಯಲ್ಲಿ ಹೆಸರು ಶೇ 56ಕ್ಕಿಂತ ಹೆಚ್ಚಿನ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಖರೀದಿ ಕೇಂದ್ರದಲ್ಲಿ 15 ಕ್ವಿಂಟಲ್ ಬದಲಾಗಿ 25 ಕ್ವಿಂಟಲ್‌ನಂತೆ ರೈತ-ರಿಂದ ಖರೀದಿಸಬೇಕು. ಇದರಿಂದ ರೈತರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಎಂ.ಎಸ್. ನಾಯಕ, ವಿ.ಎಚ್. ಕೊಪ್ಪದ, ಎ.ಜಿ. ಬಂಗಾರಿ, ಮೂಕಪ್ಪ ಕೊಪ್ಪದ, ಹನಮಪ್ಪ ಗಡಗಿ, ಮಲ್ಲಪ್ಪ ಆದಿ, ಕುತುಬುದ್ದಿನ್ ಜಲಾವರ, ಎಸ್.ಪಿ. ಬಾಬಜಿ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

## ಬೆಳೆ ಪರಿಹಾರ ಕೊಡುವಂತೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಸತತವಾಗಿ 20 ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಮುಂಗಾರು ಬೆಳೆಗಳು ಹಾನಿಯಾಗುತ್ತಿವೆ. ಆದ್ದರಿಂದ ವಿಮಾ ಕಂಪನಿಯವರು ರೈತರಿಗೆ ಬೆಳೆ ವಿಮೆ ಹಾಗೂ ಮಧ್ಯಂತರ ಬೆಳೆ ವಿಮಾ ಹಣವನ್ನು ಪಾವತಿ ಮಾಡಬೇಕೆಂದು ರೈತ ಹಿತಾಭಿವೃದ್ಧಿ ಸಂಘದ ವತಿಯಿಂದ ನಗರದ ಒಕ್ಕಲಗೇರಿಯಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ತೆರಳಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿಯವರಿಗೆ ಮನವಿ ಸಲ್ಲಿಸಿದರು.



ಮನವಿ ಸಲ್ಲಿಸಿ ಸಂಘದ ಕಾರ್ಯದರ್ಶಿ ಪರಮೇಶ್ವರಪ್ಪ ಪರಪ್ಪ ಜಂತ್ಲಿ ಮಾತನಾಡಿ, ಅಧಿಕ ಮಳೆಯಿಂದಾಗಿ ಬಿತ್ತಿದ ಬೆಳೆಗಳು ಕೊಳೆರೋಗ, ಕೀಟಬಾಧೆಗೆ ತುತ್ತಾಗಿವೆ. ಎಲ್ಲ ಬೆಳೆಗಳಿಗೂ ಸರ್ಕಾರ ಬೆಳೆ ಹಾನಿ ಕೊಡಬೇಕು ಮತ್ತು ಎಲ್ಲಾ ರೈತರಿಗೆ ಮಧ್ಯಂತರ ಪರಿಹಾರ ಕೊಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಸಪ್ಪ ಕಲಬಂಡಿ, ಕಳಕಪ್ಪ ರೇವಡಿ, ಮಂಜುನಾಥ್ ಕೋಳಿವಾಡ, ಮುತ್ತಣ್ಣ ಜೆಡಿ, ಮಂಜುನಾಥ್ ಹಿತ್ತಲಮನಿ, ವಿರೂಪಾಕ್ಷಪ್ಪ ಅಕ್ಕಿ, ಈಶ್ವರಪ್ಪ ಗುಜಮಾಗಡಿ, ಬಸವರಾಜ ಕವಳಿಕಾಯಿ, ಕರಬಸಯ್ಯ ನಲ್ವಾತವಾಡಮಠ, ರವಿ ಹುಡೇದ, ಬಸವರಾಜ್ ಹುಬ್ಬಳ್ಳಿ, ಮಂಜುನಾಥ ಮಂದಾಲಿ, ಉಮೇಶ ಲಿಂಗರೆಡ್ಡಿ (ಹೊಂಬಳ) ಶರಣಪ್ಪ (ಕದಡಿ) ಪಕೀರಗೌಡ ಪಾಟೀಲ್ (ಚಿಕ್ಕ ಹಿರೆಹಂದಿಗೋಳ) ಬಸವರಾಜ ದೊಡೆಪ್ಪನವರ (ಕದಡಿ), ಗದಗ ರೈತ ಸಂಘದ ಅಧ್ಯಕ್ಷ ಬಸವರಾಜ್ ಕವಳಿಕಾಯಿ ಉಪಸ್ಥಿತರಿದ್ದರು.

## ಕ್ಷಯ ರೋಗ ತಡೆಗಟ್ಟಲು ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಗಗಳು ತೀವ್ರವಾಗಿ ಹರಡುವ ಮುನ್ನವೇ ಗುರುತಿಸಿದರೆ ತಡೆಗಟ್ಟಬಹುದು. ಅದೇ ರೀತಿ ಕ್ಷಯರೋಗವನ್ನು ಕೂಡ ಆದಷ್ಟು ಬೇಗ ಗುರುತಿಸಿದರೆ ಅದು ಹರಡದಂತೆ ತಡೆಗಟ್ಟಲು ಸಾಧ್ಯವಿದೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾ ಯೋಜನೆಯ ಜಿಲ್ಲಾ ಸಂಯೋಜಕ ಎಫ್.ಪಿ. ಮೊದಿನ್ನವರ ಅಭಿಪ್ರಾಯಪಟ್ಟರು.

ಅವರು ನಗರದ ನವಜ್ಯೋತಿ ಸೇವಾ ಸಂಸ್ಥೆಯ ಆವರಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿ,



ಕ್ಷಯರೋಗವು ಶೀಘ್ರವಾಗಿ ಹರಡುವ ರೋಗವಾಗಿದೆ. ಇದಕ್ಕೆ ಚಿಕಿತ್ಸೆ ಲಭ್ಯವಿದ್ದು, ಸಂಪೂರ್ಣವಾಗಿ ಗುಣಮುಖರಾಗಬಹುದು. ಸರ್ಕಾರಿ ಆಸ್ಪತ್ರೆಗಳಲ್ಲಿ ಇದರ ಚಿಕಿತ್ಸೆ ಸಂಪೂರ್ಣವಾಗಿ ಉಚಿತವಾಗಿದೆ. ಹಾಗಾಗಿ ರೋಗಿಗಳು ಯಾವುದೇ ಹಿಂಜರಿಕೆ ಇಲ್ಲದೆ ಮುಕ್ತವಾಗಿ ವೈದ್ಯರೊಂದಿಗೆ ಸಮಾಲೋಚನೆ ಮಾಡಿ ಚಿಕಿತ್ಸೆ ಪಡೆದು ಗುಣಮುಖರಾಗಬೇಕು ಎಂದರು.

2025ಕ್ಕೆ ದೇಶವನ್ನು ಕ್ಷಯಮುಕ್ತ ದೇಶವಾಗಿಸುವ ಗುರಿ ಇದೆ. ಆದರೆ ಇದು ಬರೀ ಸರ್ಕಾರದಿಂದಾಗುವ ಕೆಲಸವಲ್ಲ. ಸಾರ್ವಜನಿಕ ಸಹಕಾರವೂ ಮುಖ್ಯ ಎಂದರು. ಜಿ.ಎಸ್. ಬಾಗಡೆ, ರೇಣುಕಾ ಮಾಹಿತಿ ನೀಡಿದರು. ನವಜ್ಯೋತಿ ಸೇವಾ ಸಂಸ್ಥೆಯ ವ್ಯವಸ್ಥಾಪಕಿ ನೇತ್ರಾ ಕಂಠಿ ಸೇರಿದಂತೆ ಸಿಬ್ಬಂದಿಗಳು ಹಾಜರಿದ್ದರು. ದಾನಮ್ಮ ಪ್ರಾರ್ಥಿಸಿದರು.ಶಿವಾನಂದ ಹಡಗಲಿ ಸ್ವಾಗತಿಸಿದರು. ಬಸು ಕರಲಿಂಗಣ್ಣವರ ನಿರೂಪಿಸಿದರು. ಶರಣಪ್ಪ ಸಾಲಮನಿ ವಂದಿಸಿದರು.

**ತ್ವರಿತ ನೋಂದಣಿ ಮಾಡಿಕೊಳ್ಳಲು ಮನವಿ**

## ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿ ತೆ-ೂಟಗಾರಿಕೆ ಬೆಳೆಗಳಾದ ಮಾವು, ದಾಳಿಂಬೆ, ಪಪ್ಪಾಯ ಬೆಳೆಗಳಿಗೆ ಜುಲೈ 31ಕೊನೆಯ ದಿನವಾಗಿದೆ. ರೈತರು ವಿಮಾ ಕಂತಿನ ಹಣವನ್ನು ತಾಲೂಕಿನ ಬ್ಯಾಂಕ್ ಮತ್ತು ಕಾಮನ್ ಸರ್ವಿಸ್ ಸೆಂಟರ್ ಗಳಲ್ಲಿ ರೈತರು ಪಾವತಿ ಮಾಡಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಸುರೇಶ ವಿ ಕುಂಬಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗ ಜಿಲ್ಲೆಗೆ ಅಗ್ರಿಕಲ್ಚರ್ ಇನ್ಶುರೆನ್ಸ್ ಕಂಪನಿ ವಿಮಾ ಸಂಸ್ಥೆಯಾಗಿದ್ದು, ಸದರಿ ಯೋಜನೆಯ ಅನುಷ್ಠಾನಕ್ಕೆ ಬೆಳೆವಾರು ರೈತರ ವಿವರಗಳನ್ನು ಆನ್ ಲೈನ್ ಪೋರ್ಟಲ್ ಬೆಳೆವಾರು ನೋಂದಾಯಿಸಲು ನಿರ್ಧರಿಸಲಾಗಿದೆ.

ಪ್ರತಿ ಹೆಕ್ಟರ್ ಮಾವಿಗೆ ,4000 ರೂ., ದಾಳಿಂಬೆ ರೂ. 14000 ಮತ್ತು ಪಪ್ಪಾಯ ಬೆಳೆಗೆ ರೂ. 6700 ದಂತೆ ವಿಮಾ ಮೊತ್ತವನ್ನು ಪಾವತಿ ಮಾಡಬಹುದಾಗಿದೆ.

ಆದ್ದರಿಂದ ಪ್ರಸಕ್ತ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಜುಲೈ 31ರೊಳಗೆ ಪಾವತಿಸಲು ರೈತರಲ್ಲಿ ಕೋರಿದ್ದಾರೆ.

**ಪತ್ರಿಕಾಗೋಷ್ಠಿಯಲ್ಲಿ ಕೃಷಿ ಇಲಾಖೆಯ ಉಪನಿರ್ದೇಶಕ ಬಿ.ಆರ್. ಪಾಲಾಕ್ಷಗೌಡ ಮಾಹಿತಿ**

## ರೈತರೊಂದಿಗೆ ಸಂವಾದ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಜುಲೈ 31ರಂದು ಮಧ್ಯಾಹ್ನ 2ಕ್ಕೆ ಪಟ್ಟಣದ ರೋಟರಿ ಭವನದಲ್ಲಿ ಕೃಷಿ ಇಲಾಖೆಯಿಂದ ರೈತರೊಂದಿಗೆ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಈ ಸಂವಾದದಲ್ಲಿ ನರೇಗಲ್, ರೋಣ ಮತ್ತು ಹೊಳೆ ಆಲೂರ ಹೋಬಳಿಯ ರೈತರು ಪಾಲ್ಗೊಳ್ಳಲಿದ್ದಾರೆ ಎಂದು ಕೃಷಿ ಇಲಾಖೆಯ ಉಪನಿರ್ದೇಶಕ-2 ಬಿ.ಆರ್. ಪಾಲಾಕ್ಷಗೌಡ ಹೇಳಿದರು. ಇಲ್ಲಿನ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಈ ಸಂವಾದ ಕಾರ್ಯಕ್ರಮವನ್ನು ಶಾಸಕ ಮತ್ತು ಕರ್ನಾಟಕ ರಾಜ್ಯದ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಉದ್ಘಾಟಿಸಲಿದ್ದು, ಕೃಷಿ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಪಿ.ಎಲ್. ಪಾಟೀಲರ ಘನ ಉಪಸ್ಥಿತಿಯಲ್ಲಿ ಜರುಗಲಿದೆ. ಅಧ್ಯಕ್ಷತೆಯನ್ನು ಕೃಷಿ ವಿಶ್ವ ವಿದ್ಯಾಲಯದ ವಿಸ್ತರಣಾ ನಿರ್ದೇಶಕ ಡಾ. ಎಸ್.ಎಸ್. ಅಂಗಡಿ ವಹಿಸಲಿದ್ದಾರೆ. ಸಂಶೋಧನಾ ನಿರ್ದೇಶಕ ಡಾ. ಬಿ.ಡಿ. ಬಿರಾದಾರ, ವಿಜಯಪುರದ ಸಹ ಸಂಶೋಧನಾ ನಿರ್ದೇಶಕ ಡಾ. ಅಶೋಕ ಸಜ್ಜನ, ಸಹ ವಿಸ್ತರಣಾ ನಿರ್ದೇಶಕ ಡಾ. ಆರ್.ಬಿ. ಬೆಳ್ಳಿ, ಜಂಟಿ ಕೃಷಿ ನಿರ್ದೇಶಕಿ ಜಿ.ಎಚ್. ತಾರಾಮಣಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಈ ಸಂದರ್ಭದಲ್ಲಿ ಜಕ್ಕಲಿಯ ಪ್ರಗತಿಪರ ರೈತರಾದ ಮಲ್ಲಣ್ಣ ಮೇಟಿ, ಹಾಲಕೆರೆಯ ಗಿರೀಶಗೌಡ ಪಾಟೀಲ, ನಿಡಗುಂದಿಯ ಶಿವಣ್ಣ ಸೂಡಿ ಉಪಸ್ಥಿತರಿರುವರೆಂದು ಪಾಲಾಕ್ಷಗೌಡ ತಿಳಿಸಿದರು.

ಸಂವಾದದಲ್ಲಿನ ರೈತರ ಪ್ರಶ್ನೆಗಳಿಗೆ ಉತ್ತರಿಸಲು ಪ್ರಾಧ್ಯಾಪಕ ಡಾ. ಸಿ.ಆರ್. ಪಾಟೀಲ, ಡಾ. ಬಿ.ಎನ್. ಮೊಟಗಿ, ಡಾ. ಸಂಗಶೆಟ್ಟಿ ಜಿ.ಭಾಲ್ಕುಂದೆ, ಡಾ. ವಿನಾಯಕ ನಿರಂಜನ, ಶಿವಲಿಂಗಪ್ಪ ಹೊಟ್ಕರ್ ಉಪಸ್ಥಿತರಿರುವರು. ಇದೇ ಸಂದರ್ಭದಲ್ಲಿ ರೈತರಿಗೆ ಸಾಂಕೇತಿಕವಾಗಿ ಸೂರ್ಯಕಾಂತಿ ಬೀಜದ ಕಿಟ್‌ಗಳನ್ನು ವಿತರಣೆ ಮಾಡಲಾಗುವುದು. ರೈತರಿಗೆ ತುಂತುರು ನೀರಾವರಿ ಯೋಜನೆಯಡಿ ರಿಯಾಯಿತಿ ದರದಲ್ಲಿ ಸ್ಪ್ರಿಂಕ್ಲರ್‌ಗಳನ್ನು ವಿತರಣೆ ಮಾಡಲಿದ್ದು, 63 ಎಂ.ಎಂ. ಮತ್ತು 75 ಎಂ.ಎಂನ ಸ್ಪ್ರಿಂಕ್ಲರ್‌ಗಳ ಹಂಚಿಕೆಯನ್ನು ಸಾಂಕೇತಿಕವಾಗಿ ನೆರವೇರಿಸಲಾಗುವುದು ಎಂದು ತಿಳಿಸಿದರು.

63 ಎಂ.ಎಂನ ಸ್ಪ್ರಿಂಕ್ಲರ್‌ನ ಬೆಲೆ 23,568 ರೂಗಳಾಗಿದ್ದು, ಶೇ. 90ರಷ್ಟು ರಿಯಾಯಿತಿ ದರದಲ್ಲಿ ಅದನ್ನು ಎಲ್ಲ ರೈತರಿಗೆ ನೀಡಲಾಗುತ್ತಿದೆ. ಅಂದರೆ ರೈತರು 4139ರೂ.ಗಳನ್ನು ಪಾವತಿ ಮಾಡಬೇಕು. ಹಾಗೆಯೆ 75 ಎಂ.ಎಂನ ಸ್ಪ್ರಿಂಕ್ಲರ್‌ನ ಬೆಲೆ 26,442 ರೂ.ಗಳಾಗಿದ್ದು, ರೈತರು 4667 ರೂ.ಗಳನ್ನು ಪಾವತಿ ಮಾಡಬೇಕು. ಹೋಬಳಿ ಮಟ್ಟದಲ್ಲಿ ನಡೆಯಲಿರುವ ಈ ಸಂವಾದ ಕಾರ್ಯಕ್ರಮದಲ್ಲಿ ಹೆಚ್ಚಿನ ರೈತರು ಪಾಲ್ಗೊಂಡು ಸಂವಾದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು. ಈ ಸಂದರ್ಭದಲ್ಲಿ ಶಿವನಗೌಡ ಪಾಟೀಲ, ಜಗದೀಶ ಸಂಕನಗೌಡ್ರ, ಅಲ್ಲಾಭಕ್ಷಿ ನದಾಫ್, ರೈತ ಸಂಪರ್ಕ ಕೇಂದ್ರದ ಅಧಿಕಾರಿ ಸಿ.ಕೆ. ಕಮ್ಮಾರ, ಬಾಬು ರಾಜೂರ ಉಪಸ್ಥಿತರಿದ್ದರು.

63 ಎಂ.ಎಂನ ಸ್ಪ್ರಿಂಕ್ಲರ್‌ನ ಬೆಲೆ 23,568 ರೂಗಳಾಗಿದ್ದು, ಶೇ. 90ರಷ್ಟು ರಿಯಾಯಿತಿ ದರದಲ್ಲಿ ಅದನ್ನು ಎಲ್ಲ ರೈತರಿಗೆ ನೀಡಲಾಗುತ್ತಿದೆ. ಅಂದರೆ ರೈತರು 4139ರೂ.ಗಳನ್ನು ಪಾವತಿ ಮಾಡಬೇಕು. ಹಾಗೆಯೆ 75 ಎಂ.ಎಂನ ಸ್ಪ್ರಿಂಕ್ಲರ್‌ನ ಬೆಲೆ 26,442 ರೂ.ಗಳಾಗಿದ್ದು, ರೈತರು 4667 ರೂ.ಗಳನ್ನು ಪಾವತಿ ಮಾಡಬೇಕು. ಹೋಬಳಿ ಮಟ್ಟದಲ್ಲಿ ನಡೆಯಲಿರುವ ಈ ಸಂವಾದ ಕಾರ್ಯಕ್ರಮದಲ್ಲಿ ಹೆಚ್ಚಿನ ರೈತರು ಪಾಲ್ಗೊಂಡು ಸಂವಾದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಬಿ.ಆರ್. ಪಾಲಾಕ್ಷಗೌಡ ವಿನಂತಿಸಿದರು.

## ಸಮುದಾಯದ ಬೆಳವಣಿಗೆಗೆ ಸರ್ಕಾರ ಮುಂದಾಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗಂಗಾ ಮಾತೆ ಹಾಗೂ ಭೀಷ್ಮ ಕುಲದ ಸಮುದಾಯದ ಬೆಳವಣಿಗೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿನೂತನ ಯೋಜನೆಗಳನ್ನು ಅನುಷ್ಠಾನ ಮಾಡಲು ಗದಗ ಜಿಲ್ಲಾ ನಿಜ ಶರಣ ಶ್ರೀ ಅಂಬಿಗರ ಚೌಡಯ್ಯ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಆಗ್ರಹಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ, ಸಮುದಾಯದ ಜನ ಕಡು ಬಡತನದಲ್ಲಿ ಜೀವನ ಸಾಗಿಸುತ್ತಿದ್ದು, ಸಮುದಾಯವನ್ನು ಸರಕಾರಗಳು ನಿರ್ಲಕ್ಷ್ಯ ಮಾಡುತ್ತಿರುವದು ಸೂಕ್ತವಲ್ಲ. ಗಂಗಾಮತಸ್ಥ ಸಮುದಾಯದ ಕುರುಹು ಸಾರುವ ನಗರದ ಹೃದಯ ಭಾಗದಲ್ಲಿರುವ ಭೀಷ್ಮ ಕೆರೆ ಕೇವಲ ಹೆಸರಿಗೆ ಸೀಮಿತವಾಗಿದೆ. ಗಂಗಾಮತ ಸಮುದಾಯದ ಜನ ಮೀನುಗಾರಿಕೆ ಹಾಗೂ ಸುಣ್ಣದ ವ್ಯಾಪಾರ, ಸಣ್ಣಪುಟ್ಟ ಕೆಲಸ ಮಾಡುತ್ತ ಬಡತನದಲ್ಲಿ ಜೀವನ ಸಾಗಿಸುತ್ತಿದ್ದಾರೆ. ಸರ್ಕಾರ ಸಣ್ಣ ಸಮುದಾಯದ ಮೂಲವೃತ್ತಿ ಬಯಸುವವರಿಗೆ ಹೊಸ ಯೋಜನೆ ರೂಪಿಸಲಿ ಎಂದು ಆಗ್ರಹಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka